# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು: ಮಹೇಶ್ವರಿ ಭೀಮಶಿ ಭರಮಣ್ಣವರ
EDITOR: MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail: belagavivarte1@gmail.com
epaper. belagavivarte.com
Regd No : G2/PMG/KA/NK/BM/157/26-28

Volume: 01 Issue : 94 TUESDAY 16-06-2026 PRGI No : KNKAN/26/A0962 Pages:4 Rs.2.00 M: 9742418836

## 1993ರಲ್ಲಿ 3 ಎಕರೆ ಇದ್ದ ಆಸ್ತಿ 2018ಕ್ಕೆ 1,400 ಕೋಟಿ ರೂ ಹೇಗಾಯ್ತು?; ರೈತರಿಗೂ ಶ್ರೀಮಂತರಾಗುವ ಮಾರ್ಗ ಹೇಳಿಕೊಡಿ: HD ಕುಮಾರಸ್ವಾಮಿ



ಬೆಂಗಳೂರು: ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ರಿಯಲ್ ಎಸ್ಟೇಟ್ ದೊರೆ. 1999ರಲ್ಲಿ ಕೇವಲ ಮೂರು ಎಕರೆ ಹೊಂದಿದ್ದ ರಾಜ್ಯದ ಮುಖ್ಯಮಂತ್ರಿ ಆಸ್ತಿ 2018ರ ವೇಳೆಗೆ 1,400 ಕೋಟಿ ಹೇಗಾಯಿತು? ಇಷ್ಟು ವೇಗವಾಗಿ ಶ್ರೀಮಂತರಾಗುವುದು ಹೇಗೆ ಎಂದು ರೈತರಿಗೂ ಹೇಳಲಿ ಎಂದು ಕುಮಾರಸ್ವಾಮಿ ವ್ಯಂಗ್ಯವಾಡಿದ್ದಾರೆ.

ಮಾಧ್ಯಮದವರೊಂದಿಗೆ ಮಾತನಾಡಿದ ಅವರು ನೇರವಾಗಿ ರಾಜ್ಯ ಕಾಂಗ್ರೆಸ್ ಸರ್ಕಾರವೇ ಜನರ ಭೂಮಿಯನ್ನು ಲೂಟಿ ಹೊಡೆಯಲು ಹೊರಟಿದೆ. ನೇರವಾಗಿ ಮುಖ್ಯಮಂತ್ರಿಗಳೇ ರಿಯಲ್ ಎಸ್ಟೇಟ್ ಮಾಫಿಯಾ ದೊರೆಗಳ ಜೊತೆ ಕೈ ಜೋಡಿಸಿ ಈ ದಂಧೆ ನಡೆಸುತ್ತಿದ್ದಾರೆ.

ಬಹುಪಾಲು ರೈತರು ಭೂಮಿ ಕೊಡಲು ತಯಾರಿಲ್ಲ. ಪೊಲೀಸರು ಮತ್ತು ರೌಡಿಗಳನ್ನು ಬಿಟ್ಟು ರೈತರನ್ನು ಬೆದರಿಸುವ ಕೆಲಸ ಮಾಡುತ್ತಿದ್ದಾರೆ. ಸರ್ಕಾರವೇ ರಿಯಲ್ ಎಸ್ಟೇಟ್ ಏಜೆಂಟ್ ಆಗಿ ಕೆಲಸ ಮಾಡುತ್ತಿದೆ' ಎಂದು ಗಂಭೀರ ಆರೋಪ ಮಾಡಿದರು.

'ಬಿಡದಿ ಟೌನ್‌ಶಿಪ್‌ಗೆ ಪ್ರಧಾನಿ ನರೇಂದ್ರ ಮೋದಿ 'ಗ್ರೀನ್ ಸಿಗ್ನಲ್' ಕೊಟ್ಟಿದ್ದಾರೋ ಇಲ್ಲವೋ ಗೊತ್ತಿಲ್ಲ. ಮೋದಿ ಅವರು ಗುಜರಾತ್‌ನಲ್ಲಿ ಬರಡು ಭೂಮಿಯಲ್ಲಿ ಟೌನ್‌ಶಿಪ್ ಮಾಡಿದ್ದಾರೆ. ಡಿಕೆಶಿ ಅವರು ಮಾಡುತ್ತಿರುವ ಜಾಗದಲ್ಲಿ ಲಕ್ಷಾಂತರ ತೆಂಗು, ಅಡಿಕೆ ಬೆಳೆ ಬೆಳೆಯುತ್ತಾರೆ. ಉಪಯೋಗಕ್ಕೆ ಬಾರದ ಜಾಗದಲ್ಲಿ ಟೌನ್‌ಶಿಪ್ ಮಾಡಿದರೆ ನನ್ನ ಅಭ್ಯಂತರವಿಲ್ಲ' ಎಂದರು.

'ಹಿಂದೆ 'ಬಿ.ಎಂ.ಐ.ಸಿ.ಪಿ' ಎಂಬ ಪ್ರಾಧಿಕಾರ ರಚಿಸಿ, ಅದಕ್ಕೆ ಡಿಕೆಶಿ ಅಧ್ಯಕ್ಷರಾಗಿದ್ದರು. ಬೆಂಗಳೂರು–ಮೈಸೂರು ರಸ್ತೆಯಲ್ಲಿ 1.75 ಲಕ್ಷ ಎಕರೆ ಭೂಮಿಯನ್ನು ರಸ್ತೆಗೆ ಮತ್ತು ಟೌನ್‌ಶಿಪ್ ಮಾಡಲು ಸ್ವಾಧೀನಪಡಿಸಿಕೊಳ್ಳಲು ಅಧಿಸೂಚನೆ ಹೊರಡಿಸಿದ್ದರು. ಕಳೆದ 30 ವರ್ಷಗಳಲ್ಲಿ ಏನಾಯ್ತು ಆ ಪ್ರಾಜೆಕ್ಟ್' ಎಂದು ಪ್ರಶ್ನಿಸಿದರು.

ಮೋದಿ ಅವರ ಆಡಳಿತದ ಗುಜರಾತ್‌ನಲ್ಲಿ ಟೌನ್‌ಶಿಪ್‌ಗಳು ಬಂದಿದೆ ಎಂಬುದು ನಿಜ. ಆದರೆ, ಅಲ್ಲಿ ರೈತರ ಕೃಷಿ ಭೂಮಿಯನ್ನು ಕಿತ್ತುಕೊಂಡು ಇಂತಹ ಯೋಜನೆಗಳನ್ನು ಮಾಡಿಲ್ಲ. ಒಣಭೂಮಿ ಮತ್ತು ನೀರಾವರಿಗೆ ಯೋಗ್ಯವಲ್ಲದ ಪ್ರದೇಶಗಳಲ್ಲಿ ಇಂತಹ ಬೃಹತ್ ಯೋಜನೆಗಳನ್ನು ಅನುಷ್ಠಾನ ಮಾಡಿದ್ದಾರೆ. ಬೇಕಿದ್ದರೆ ಹೋಗಿ ನೋಡಿಕೊಂಡು ಬರಲಿ ಎಂದು ಅವರು ಹೇಳಿದರು.

## ಮತ ಚೀಟಿ ಇದ್ದವರಿಗೆ ಮಾತ್ರ ಗ್ಯಾರಂಟಿ: ಡಿಕೆಶಿ

ಬೆಂಗಳೂರು: ಗ್ಯಾರಂಟಿ ಯೋಜನೆಗಳನ್ನು ಸರ್ಕಾರ ಸ್ಥಗಿತಗೊಳಿಸಲಿದೆ ಎಂಬ ವಿರೋಧ ಪಕ್ಷಗಳ ಆರೋಪವನ್ನು ತಳ್ಳಿಹಾಕಿದ ಮುಖ್ಯಮಂತ್ರಿಗಳು, "ಟೀಕೆ ಮಾಡುವುದಕ್ಕಾಗಿಯೇ ವಿರೋಧ ಪಕ್ಷದವರಿದ್ದಾರೆ. ಯೋಜನೆಗಳನ್ನು ತಡೆಯುವುದು ಅವರ ಕೆಲಸ, ಅದನ್ನೇ ಅವರು ಮಾಡುತ್ತಿದ್ದಾರೆ.

ಅವರ ಕೈಯಲ್ಲಿ ಇಂತಹ ಯೋಜನೆಗಳನ್ನು ಜಾರಿ ಮಾಡಲು ಸಾಧ್ಯವಾಗಿಲ್ಲ. ಆದರೆ ನಾವು ಮಾಡಿಕೊಟ್ಟಿದ್ದೇವೆ" ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ತಿರುಗೇಟು ನೀಡಿದರು.

ಇಂದು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಬಿಡದಿ ಟೌನ್‌ಶಿಪ್ ವಿವಾದ ಹಾಗೂ ಗ್ಯಾರಂಟಿ ಯೋಜನೆಗಳ ಕುರಿತು ವಿರೋಧ ಪಕ್ಷಗಳ ಟೀಕೆಗಳಿಗೆ ತೀಕ್ಷ್ಣ ಪ್ರತಿಕ್ರಿಯೆ ನೀಡಿದರು.

ಗ್ಯಾರಂಟಿ ಹಣ ದುರುಪಯೋಗವಾಗುತ್ತಿರುವ ಬಗ್ಗೆ ಜಾಗೃತಿ ವಹಿಸಲಾಗುತ್ತಿದೆ ಎಂದರು. "ಆರಂಭದಲ್ಲಿ ತರಾತುರಿಯಲ್ಲಿ ಅರ್ಜಿ ಸಲ್ಲಿಸುವಾಗ ಯಾರದ್ದೋ ಮೊಬೈಲ್ ನಂಬರ್, ದಾಖಲೆ ನೀಡಿದ್ದರಿಂದ ಹಣ ಬೇರೆಯವರ ಖಾತೆಗೆ ಜಮೆಯಾಗುತ್ತಿರುವುದು ನಮ್ಮ ಗಮನಕ್ಕೆ ಬಂದಿದೆ. ಈಗ ನಮ್ಮ ಬಳಿ ಸೂಕ್ತ ದಾಖಲೆಗಳಿವೆ. ಗ್ಯಾರಂಟಿ ತಲುಪಲು ಫೋಟೋ ಐಡೆಂಟಿಫಿಕೇಷನ್ ಹಾಗೂ ಸೂಕ್ತ ದಾಖಲೆ ಬೇಕು. ನಾವು ಕರ್ನಾಟಕದವರಿಗೆ ಮಾತ್ರ ಯೋಜನೆ ನೀಡುತ್ತೇವೆ. ಇಲ್ಲಿ ವೋಟ್ (ಮತದಾನದ ಹಕ್ಕು) ಇದ್ದವರಿಗೆ ಮಾತ್ರ ಗ್ಯಾರಂಟಿ ಸಿಗಲಿದೆ" ಎಂದು ಮಹತ್ವದ ಹೇಳಿಕೆ ನೀಡಿದರು.



ಜೆಡಿಎಸ್ ಕೈಗೊಂಡಿರುವ ಪಾದಯಾತ್ರೆ ಕುರಿತು ಪ್ರತಿಕ್ರಿಯಿಸಿದ ಸಿಎಂ, ಬಿಡದಿ ಟೌನ್‌ಶಿಪ್ ಯೋಜನೆ ತಂದಿದ್ದು ನಾನಲ್ಲ ಎಂದು ಸ್ಪಷ್ಟನೆ ನೀಡಿದರು.

ಮಹಾರಾಷ್ಟ್ರದಲ್ಲಿ 80 ಸಾವಿರ ಎಕರೆ ಹಾಗೂ ತೆಲಂಗಾಣದಲ್ಲಿ 40 ಸಾವಿರ ಎಕರೆ ಭೂಸ್ವಾಧೀನ ಮಾಡಿ ಟೌನ್‌ಶಿಪ್ ನಿರ್ಮಿಸಲಾಗಿದೆ. ಬಿಡದಿಯಲ್ಲಿ ನಾನು ಟೌನ್‌ಶಿಪ್ ಮಾಡುತ್ತಿಲ್ಲ. ಹಿಂದೆ ಕುಮಾರಸ್ವಾಮಿ ಅವರ ಅವಧಿಯಲ್ಲೇ ಈ ಟೌನ್‌ಶಿಪ್ ಘೋಷಣೆಯಾಗಿತ್ತು. ಅಷ್ಟೇ ಅಲ್ಲದೆ, ಹಿಂದೆ ಬಿಜೆಪಿ ಸರ್ಕಾರದ ಅವಧಿಯಲ್ಲಿ KIADB ಗೆ 1 ಸಾವಿರ ಎಕರೆ ಭೂಮಿ ಕೊಟ್ಟಿದ್ದರಲ್ಲಾ, ಆಗ ರೈತರ ಜಮೀನು ಹೋಗಿರಲಿಲ್ಲವೇ ಅವರು ಕೇವಲ ರಾಜಕಾರಣ ಮಾಡುತ್ತಿದ್ದಾರೆ, ಮಾಡಲಿ" ಎಂದು ಡಿ.ಕೆ. ಶಿವಕುಮಾರ್ ವಾಗ್ದಾಳಿ ನಡೆಸಿದರು.

ನಮ್ಮ ಸ್ನೇಹಿತ ಹಾಗೂ ಶಾಸಕ ಇಕ್ಬಾಲ್ ಹುಸೇನ್ ಅವರಿಗೆ ಎಡಗೈ ಹಾಗೂ ಎದೆಯ ಭಾಗದಲ್ಲಿ ಲಘು ನೋವು ಕಾಣಿಸಿಕೊಂಡ ತಕ್ಷಣವೇ ವೈದ್ಯರ ಬಳಿ ಕರೆತರಲಾಗಿದೆ. ಸದ್ಯ ಅವರು ಆರೋಗ್ಯವಾಗಿದ್ದು, ವೈದ್ಯರು ತಪಾಸಣೆ ನಡೆಸಿದ್ದಾರೆ. ಯಾರೂ ಗಾಬರಿಯಾಗಬೇಕಾಗಿಲ್ಲ. ವೀಕೆಂಡ್ ಮುಗಿದ ನಂತರ ಅವರು ಫೋರ್ಟಿಸ್ ಆಸ್ಪತ್ರೆಯಲ್ಲಿ ಮುಂದಿನ ಚಿಕಿತ್ಸೆ ಪಡೆಯಲಿದ್ದಾರೆ. ನಾನು ಈಗಾಗಲೇ ವೈದ್ಯರೊಂದಿಗೆ ಮಾತನಾಡಿದ್ದು, ಆತಂಕ ಪಡುವಂತಹದ್ದು ಏನೂ ಇಲ್ಲ" ಎಂದು ಸಿಎಂ ಸ್ಪಷ್ಟಪಡಿಸಿದರು

## ಶಿಷ್ಯಂದಿರ ಒಳ್ಳೆಯ ಸಾಧನೆಯೆ ಗುರುದಕ್ಷಿಣೆಯಾಗಿದ್ದು ಇದರಿಂದ ಗುರುಗಳು ಸಂತುಷ್ಟಗೊಳ್ಳುತ್ತಾರೆ: ನಿವೃತ್ತ ಶಿಕ್ಷಕಿ ಹಾಗೂ ಸಾಹಿತಿ ಶಕುಂತಲಾ ದಂಡಗಿ

ಗೋಕಾಕ: ಶಿಷ್ಯಂದಿರ ಒಳ್ಳೆಯ ಸಾಧನೆಯೆ ಗುರುದಕ್ಷಿಣೆಯಾಗಿದ್ದು ಇದರಿಂದ ಗುರುಗಳು ಸಂತುಷ್ಟಗೊಳ್ಳುತ್ತಾರೆಂದು ನಿವೃತ್ತ ಶಿಕ್ಷಕಿ ಹಾಗೂ ಸಾಹಿತಿ ಶಕುಂತಲಾ ದಂಡಗಿ ಹೇಳಿದರು.

ಅವರು, ರವಿವಾರದಂದು ನಗರದ ಶುಭಂ ಗಾರ್ಡನನಲ್ಲಿ 1979–80ನೇ ಸಾಲಿನ ಎಮ್‌ಎಚ್‌ಎಸ್, ಎಮ್‌ಎನ್‌ಎಸ್, ಎಮ್‌ಇಎಸ್, ಜಿವ್ಹಿಎಸ್ ಶಾಲೆಗಳ ಹತ್ತನೇ ತರಗತಿ ವಿದ್ಯಾರ್ಥಿಗಳ ಪುನರ ಮೀಲನ ಹಾಗೂ ಗುರುವಂದನಾ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡುತ್ತಿದ್ದರು.

ಶಿಷ್ಯಂದಿರ ಉಜ್ವಲ ಭವಿಷ್ಯಕ್ಕಾಗಿ ಶ್ರಮಿಸುತ್ತಿರುವ ವೃತ್ತಿ ಶಿಕ್ಷಕ ವೃತ್ತಿಯಾಗಿದೆ. ಇಂದು ಗುರುಗಳ ಪಾದ ಪೂಜೆ ಮಾಡಿ ಸತ್ಕರಿಸಿ ಸಂಸ್ಕಾರಯುತ ಕಾರ್ಯವನ್ನು ನೀವೆಲ್ಲ ನೀಡುತ್ತಿರುವದು ಮುಂದಿನ ಪೀಳಿಗೆಗೆ ಮಾದರಿಯಾಗಿದೆ. ಹುಟ್ಟು ಸಾವಿನ ನಡುವೆ ಒಳ್ಳೆಯ ಸಾಧನೆ ಮಾಡಬೇಕು. ಅಂತಹ ಸಾಧನೆ ಮಾಡಿದ ಶಿಷ್ಯಂದಿರನ್ನು ಪಡೆದ ನಾವೆಲ್ಲರೂ ಧನ್ಯರು ಎಂದರು.




ಗೋಕಾಕ: 1979–80ನೇ ಸಾಲಿನ ಎಮ್‌ಎಚ್‌ಎಸ್, ಎಮ್‌ಎನ್‌ಎಸ್, ಎಮ್‌ಇಎಸ್, ಜಿವ್ಹಿಎಸ್ ಶಾಲೆಗಳ ಹತ್ತನೇ ತರಗತಿ ವಿದ್ಯಾರ್ಥಿಗಳ ಪುನರ ಮೀಲನ ಹಾಗೂ ಗುರುವಂದನಾ ಕಾರ್ಯಕ್ರಮ ಉದ್ಘಾಟಿಸುತ್ತಿರುವದು.

ಈ ಸಂದರ್ಭದಲ್ಲಿ ಅಂದಿನ ಶಿಕ್ಷಕರಾದ ಫಕೀರಪ್ಪ ತೇರದಾಳ, ಮಹ್ಮದಿಸಾಕ ಕುಂಬಾರಿ, ಪಾಂಡುರಂಗ ಕದಮ, ಗುರುಪಾದಯ್ಯ ಹಿರೇಮಠ, ಮಲ್ಲಿಕಾರ್ಜುನ ಗಾಣಗಿ, ಮಹಾದೇವ ಹಾದಿಮನಿ, ಚಂದ್ರಶೇಖರ ಮೇಗಲಮನಿ, ಮಹ್ಮದಸುಲ್ತಾನ ಕೋತವಾಲ, ಭೀಮಪ್ಪ ಪಟಗುಂದಿ, ರತ್ನಕ್ಕ ವರದಾಯಿ, ವಿಜಯಲಕ್ಷ್ಮೀ ಅಂಗಡಿ, ಉಪಪ್ರಚಾರ್ಯ ಎಮ್ ಬಿ ಬಳಗಾರ, ಹಳೆಯ ವಿದ್ಯಾರ್ಥಿಗಳಾದ ನಾಗಲಿಂಗ ಪೋತದಾರ, ಸೋಮಶೇಖರ ಮಗದುಮ, ನಿಜಾನಂದ ಅರಭಾಂವಿ, ಸುನೀಲ ಅಂಕದವರ ಸೇರಿದಂತೆ ಅನೇಕರು ಇದ್ದರು.

## ಮದುವೆ ಹೆಸರಿನಲ್ಲಿ ವಂಚನೆ? ಕಾಂಗ್ರೆಸ್ ನಾಯಕಿ ವಿರುದ್ಧ ಆರೋಪ



ಬೆಳಗಾವಿ: ಮದುವೆಯ ಭರವಸೆ ನೀಡಿ ಯುವತಿಯನ್ನು ವಂಚಿಸಲಾಗಿದೆ ಹಾಗೂ ಬಳಿಕ ಆಕೆಯ ಮೇಲೆ ರಾಜಕೀಯ ಪ್ರಭಾವ ಬಳಸಿ ಒತ್ತಡ ಹೇರಲಾಗಿದೆ ಎಂಬ ಆರೋಪದ ಪ್ರಕರಣ ಬೆಳಗಾವಿಯಲ್ಲಿ ಭಾರೀ ಚರ್ಚೆಗೆ ಗ್ರಾಸವಾಗಿದೆ. ಈ ಪ್ರಕರಣದಲ್ಲಿ ಕಾಂಗ್ರೆಸ್ ನಾಯಕಿ ಆಯೇಷಾ ಸನದಿ ವಿರುದ್ಧವೂ ಗಂಭೀರ ಆರೋಪಗಳು ಕೇಳಿಬಂದಿವೆ.

ಯುವತಿಯ ಪಾಲಕರು ಬೆಳಗಾವಿ ಪೊಲೀಸ್ ಆಯುಕ್ತರಿಗೆ ಸಲ್ಲಿಸಿರುವ ದೂರಿನ ಪ್ರಕಾರ, ಸಲೀಂ ಕಿಲ್ಲೇದಾರ್ ಎಂಬ ಯುವಕ ಮದುವೆಯಾಗುವುದಾಗಿ ನಂಬಿಸಿ ಯುವತಿಯೊಂದಿಗೆ ಆಪ್ತ ಸಂಬಂಧ ಬೆಳೆಸಿಕೊಂಡಿದ್ದಾನೆ. ಈ ವೇಳೆ ಇಬ್ಬರ ಖಾಸಗಿ ಕ್ಷಣಗಳ ಫೋಟೊಗಳು ಹಾಗೂ ಇತರೆ ಮಾಹಿತಿಗಳನ್ನು ತನ್ನ ಬಳಿ ಇಟ್ಟುಕೊಂಡಿದ್ದಾನೆ ಎಂದು ದೂರಿನಲ್ಲಿ ಆರೋಪಿಸಲಾಗಿದೆ.

ನಂತರ ಯುವತಿ ಮದುವೆಯಾಗುವಂತೆ ಒತ್ತಾಯಿಸಿದಾಗ, ಆಕೆಯನ್ನು ಹಿಂದೆ ಸರಿಸಲು ವಿವಿಧ ರೀತಿಯ ಒತ್ತಡ ಹಾಗೂ ಬೆದರಿಕೆಗಳು ಬಂದಿವೆ ಎಂದು ಪಾಲಕರು ದೂರಿದ್ದಾರೆ. ಯುವತಿ ಸಂಬಂಧ ಮುಂದುವರಿಸಿ ಮದುವೆಯಾಗಲು ಬಯಸಿದ್ದರೂ, ಅದನ್ನು ತಡೆಯಲು ರಾಜಕೀಯ ಪ್ರಭಾವ ಬಳಸಲಾಗಿದೆ ಎಂಬ ಆರೋಪವೂ ಕೇಳಿಬಂದಿದೆ.

ಖಾಸಗಿ ಫೋಟೊ ಬಹಿರಂಗಪಡಿಸುವ ಬೆದರಿಕೆ ಆರೋಪ : ದೂರಿನಲ್ಲಿರುವ ಮಾಹಿತಿಯಂತೆ, ಯುವತಿ ತನ್ನ ನಿರ್ಧಾರದಿಂದ ಹಿಂದೆ ಸರಿಯದಿದ್ದರೆ ಆಕೆಯ ಖಾಸಗಿ ಕ್ಷಣಗಳ ಫೋಟೊಗಳನ್ನು ಮಾಧ್ಯಮ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ಹರಿಬಿಡುವುದಾಗಿ ಬೆದರಿಕೆ ಹಾಕಲಾಗಿದೆ ಎನ್ನಲಾಗಿದೆ. ಈ ಬೆಳವಣಿಗೆಗಳಿಂದ ಯುವತಿ ತೀವ್ರ ಮಾನಸಿಕ ಒತ್ತಡಕ್ಕೆ ಒಳಗಾಗಿದ್ದಳು ಎಂದು ಕುಟುಂಬಸ್ಥರು ತಿಳಿಸಿದ್ದಾರೆ.


ಇದೇ ಒತ್ತಡ ಹಾಗೂ ಕಿರುಕುಳದ ಹಿನ್ನೆಲೆಯಲ್ಲಿ ಯುವತಿ ಆತ್ಮಹತ್ಯೆಗೆ ಯತ್ನಿಸಿದ್ದು, ಸದ್ಯ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಾ ಜೀವನ–ಮರಣದ ನಡುವೆ ಹೋರಾಟ ನಡೆಸುತ್ತಿದ್ದಾಳೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಸಚಿವರ ಹೆಸರು ದುರ್ಬಳಕೆ ಆರೋಪ : ಪ್ರಕರಣದ ಮತ್ತೊಂದು ಗಂಭೀರ ಅಂಶವೆಂದರೆ, ಕಾಂಗ್ರೆಸ್ ನಾಯಕಿ ಆಯೇಷಾ ಸನದಿ ಅವರು ರಾಜಕೀಯ ಪ್ರಭಾವದ ಹೆಸರಿನಲ್ಲಿ ಬೆದರಿಕೆ ಹಾಕಿದ್ದಾರೆ ಎಂಬ ಆರೋಪ. ದೂರಿನ ಪ್ರಕಾರ, "ನನಗೆ ಸಚಿವ ಸತೀಶ ಜಾರಕಿಹೊಳಿ ಅವರ ಪಿಎ ಪರಿಚಯವಿದೆ. ಪೊಲೀಸ್ ಠಾಣೆಯಲ್ಲಿಯೂ ನನ್ನ ಮಾತೇ ನಡೆಯುತ್ತದೆ" ಎಂದು ಹೇಳಿ ಒತ್ತಡ ಹೇರಲಾಗಿದೆ ಎಂದು ಯುವತಿಯ ಪಾಲಕರು ಆರೋಪಿಸಿದ್ದಾರೆ.

ಈ ಆರೋಪಗಳು ಪ್ರಕರಣಕ್ಕೆ ಮತ್ತಷ್ಟು ರಾಜಕೀಯ ಆಯಾಮವನ್ನು ನೀಡಿದ್ದು, ಘಟನೆ ಕುರಿತು ಸಮಗ್ರ ತನಿಖೆ ನಡೆಸುವಂತೆ ಕುಟುಂಬಸ್ಥರು ಆಗ್ರಹಿಸಿದ್ದಾರೆ.

**ಪೊಲೀಸ್ ತನಿಖೆಗೆ ಒತ್ತಾಯ :** ಯುವತಿಯ ಆತ್ಮಹತ್ಯೆ ಯತ್ನದ ಹಿನ್ನೆಲೆ, ಪ್ರಕರಣದಲ್ಲಿ ಭಾಗಿಯಾಗಿರುವ ಎಲ್ಲರ ಪಾತ್ರದ ಬಗ್ಗೆ ನಿಷ್ಪಕ್ಷಪಾತ ತನಿಖೆ ನಡೆಸಬೇಕು ಎಂದು ಕುಟುಂಬ ಸದಸ್ಯರು ಹಾಗೂ ಸಾರ್ವಜನಿಕ ವಲಯದಿಂದ ಒತ್ತಾಯ ಕೇಳಿಬರುತ್ತಿದೆ.

## ಜೂ 17 ರಂದು ಶ್ರೀ ಮುರುಘೇಂದ್ರ ಶಿವಯೋಗಿಗಳ ಜಾತ್ರಾ ಮಹೋತ್ಸವ



ಅಥಣಿ: ತಾಲೂಕಿನ ನದಿ ಇಂಗಳಗಾಂವ ಗ್ರಾಮದ ಪುಣ್ಯಕ್ಷೇತ್ರ ಅತ್ತಿಗಿಡ ಪೇರಲ ತೋಟ ತಪೋವನದಲ್ಲಿ ಜೂ17 ರ ಬುಧವಾರ ಶ್ರೀ ಮುರುಘೇಂದ್ರ ಮಹಾ ಶಿವಯೋಗಿಗಳ ಜಾತ್ರಾ ಮಹೋತ್ಸವ ವಿಜೃಂಭಣೆಯಿಂದ ಜರುಗಲಿದೆ.

ಬೆಳಿಗ್ಗೆ 9 ಗಂಟೆಗೆ ಶ್ರೀ ಮುರುಘೇಂದ್ರ ಶಿವಯೋಗಿಗಳ ಗದ್ದುಗೆಗೆ ಸಕಲ ಸದ್ಭಕ್ತರಿಂದ ಪಂಚಾಮೃತಾಭಿಷೇಕ ನೆರವೇರಲಿದ್ದು ಬಳಿಕ ಭಕ್ತಾದಿಗಳಿಗೆ ಶಿವಪ್ರಸಾದ ವಿತರಣೆ ನಡೆಯಲಿದೆ ಬೆಳಿಗ್ಗೆ 10 ಗಂಟೆಯಿಂದ ಭಜನಾ ಕಾರ್ಯಕ್ರಮ ಆರಂಭವಾಗಲಿದ್ದು ತೇರದಾಳದ ರಾಯಪ್ಪಾ ಕುಂಬಾರ, ಅಥಣಿಯ ಮಲ್ಲಿಕಾರ್ಜುನ ಹಳದಮಳ, ಮಧುರಖಂಡಿಯ ಮಹಾಲಿಂಗಯ್ಯ ಸೇರಿದಂತೆ 25ಕ್ಕೂ ಹೆಚ್ಚು ಹೆಸರಾಂತ ಭಜನಾ ಕಲಾವಿದರು ಭಾಗವಹಿಸಲಿದ್ದಾರೆ.

ಶ್ರೀ ಮುರುಘೇಂದ್ರ ಶಿವಯೋಗಿ ಜೀರ್ಣೋದ್ಧಾರ ಕಮಿಟಿ ಆಯೋಜಿಸಿರುವ ಈ ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಶ್ರೀ ಶಿವಯೋಗೀಶ್ವರ ಮಠದ ಮ.ನಿ.ಪ್ರ ಸಿದ್ಧಲಿಂಗ ಮಹಾಸ್ವಾಮಿಗಳು ಅಥಣಿಯ ಗಚ್ಚಿನ ಮಠ ಮ.ನಿ.ಪ್ರ ಶಿವಬಸವ ಮಹಾಸ್ವಾಮಿಗಳು ಅಧ್ಯಕ್ಷತೆ ಹಾಗೂ, ಶೆಟ್ಟರ ಮಠದ ಮ.ನಿ.ಪ್ರ ಮರುಳಸಿದ್ಧ ಮಹಾಸ್ವಾಮಿಗಳು ಸಮ್ಮುಖ ವಹಿಸುವರು.

ಶ್ರೀ ಮುರುಘೇಂದ್ರ ಮಹಾಶಿವಯೋಗಿಗಳನ್ನು ಅಥಣಿ ಭಾಗದ ಜನತೆ ಮಹಾತಪಸ್ವಿ ಹಾಗೂ ಜಂಗಮಜ್ಯೋತಿ ಎಂದು ಭಕ್ತಿಯಿಂದ ಸ್ಮರಿಸುತ್ತಾರೆ ಇವರು ಅತ್ತಿಗಿಡ ಪೇರಲ ತೋಟದಲ್ಲಿ ದೀರ್ಘಕಾಲ ಅನುಷ್ಠಾನ ಗೈದು ತಪಸ್ಸು ಮಾಡಿದ ಪುಣ್ಯಕ್ಷೇತ್ರ ಇದಾಗಿದೆ ಶರಣ ಸಂಸ್ಕೃತಿ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಂಡಿದ್ದ ಶಿವಯೋಗಿಗಳು, ಕಾಯಕವೇ ಕೈಲಾಸ ಎಂಬ ತತ್ವಕ್ಕೆ ಬದ್ಧರಾಗಿ ಬದುಕಿದವರು

ಸ್ಥಳೀಯ ಹಿರಿಯರ ಪ್ರಕಾರ, ಶಿವಯೋಗಿಗಳು ತಮ್ಮ ತಪೋ ಬಲದಿಂದ ಹಲವಾರು ಪವಾಡಗಳನ್ನು ಮೆರೆದಿದ್ದು ದಾಸೋಹ ತತ್ವಕ್ಕೆ ಹೆಚ್ಚು ಒತ್ತು ನೀಡುತ್ತಿದ್ದ ಇವರು ಬಂದ ಭಕ್ತರಿಗೆ ಅನ್ನ ದಾಸೋಹ ಜ್ಞಾನದಾಸೋಹ ನೀಡುತ್ತಿದ್ದರು ಇವರ ಗದ್ದುಗೆ ಇರುವ ಅತ್ತಿಗಿಡ ಪೇರಲ ತೋಟ ಪ್ರಮುಖ ತಪೋವನವಾಗಿ ಭಕ್ತರ ಪಾಲಿನ ಆರಾಧ್ಯ ಸ್ಥಳವಾಗಿ ರೂಪುಗೊಂಡಿದೆ.

ಪ್ರತಿ ವರ್ಷ ನಡೆಯುವ ಈ ಜಾತ್ರೆಗೆ ಅಥಣಿ ತಾಲೂಕು ಮಾತ್ರವಲ್ಲದೆ ನೆರೆಯ ಮಹಾರಾಷ್ಟ್ರ, ವಿಜಯಪುರ, ಬಾಗಲಕೋಟೆ ಜಿಲ್ಲೆಗಳಿಂದಲೂ ಸಾವಿರಾರು ಭಕ್ತರು ಆಗಮಿಸುತ್ತಾರೆ ಜೀರ್ಣೋದ್ಧಾರ ಕಮಿಟಿಯವರು ಈ ಬಾರಿ ಭಕ್ತರಿಗೆ ಎಲ್ಲ ರೀತಿಯ ವ್ಯವಸ್ಥೆ ಕಲ್ಪಿಸಿದ್ದು, ನಾಡಿನ ಸಮಸ್ತ ಭಜನಾ ಕಲಾ ಆರಾಧಕರು ಹಾಗೂ ಸದ್ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಕೋರಿದ್ದಾರೆ.

## ಡಿಪ್ಲೋಮಾ ಪ್ರವೇಶಕ್ಕೆ ಅರ್ಜಿ ಆಹ್ವಾನ

ಬಾಗಲಕೋಟೆ ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ ವ್ಯಾಪ್ತಿಯ ಮುಧೋಳ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಯಲ್ಲಿ 2026–27ನೇ ಸಾಲಿನ 2 ವರ್ಷಗಳ ಐಟಿಐ, ದ್ವಿತೀಯ ಪಿಯುಸಿ (ಸೈನ್ಸ್, ತಾಂತ್ರಿಕ ವಿಷಯಗಳಲ್ಲಿ) ಉತ್ತೀರ್ಣರಾಗಿರುವ ಅರ್ಹ ಅಭ್ಯರ್ಥಿಗಳಿಗೆ ಲ್ಯಾಟರಲ್ ಎಂಟ್ರಿ ಸ್ಕೀಂ ಮುಂಖಾಂತರ 2ನೇ ವರ್ಷ, 3ನೇ ಸೆಮೆಸ್ಟರ ಡಿಪ್ಲೋಮಾ ಕೋರ್ಸಗಳಿಗೆ ಆಫ್‌ಲೈನ್ ಮೂಲಕ ವಿದ್ಯಾರ್ಥಿಗಳ ಪ್ರವೇಶ ಪ್ರಕ್ರಿಯೆಗೆ ಅರ್ಜಿ ಆಹ್ವಾನಿಸಲಾಗಿದೆ. ಸಿವಿಲ್ ಇಂಜಿನೀಯರಿಂಗ್, ಕಂಪ್ಯೂಟರ ಸೈನ್ಸ್ ಇಂಜಿನೀಯರಿಂಗ್, ಇಲೆಕ್ಟ್ರಾನಿಕ್ಸ್ ಆಂಡ್ ಕಮ್ಯುನಿಕೇಶನ ಇಂಜಿನೀಯರಿಂಗ್ ಹಾಗೂ ಮೆಕ್ಯಾನಿಕಲ್ ಇಂಜಿನೀಯರಿಂಗ್ ಸೇರಿ ಒಟ್ಟು 4 ವಿಭಾಗಗಳಿರುತ್ತವೆ. ಅರ್ಹ ಅಭ್ಯರ್ಥಿಗಳನ್ನು ಮೆರಿಟ್ ಆಧಾರದ ಮೇಲೆ ಪ್ರವೇಶ ನೀಡಲಾಗುತ್ತದೆ. ಪ್ರವೇಶ ಪಡೆಯಲು ಕೊನೆಯ ದಿನ ಜೂನ್ 20 ಆಗಿದೆ. ಹೆಚ್ಚಿನ ಮಾಹಿತಿಗಾಗಿ ಮೊನಂ.8123111490ಗೆ ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

# ರೋಜರ್ಸ್ ಅಂಡ್ ರೋವರ್ಸ್ ಘಟಕದ ಕಾರ್ಯಗಾರ



ವಿಜಯಪುರ: ನಗರದ ಬಸವೇಶ್ವರ ವಿದ್ಯಾವರ್ಧಕ ಸಂಸ್ಥೆಯ ದಿ ಪ್ರೆಸಿಡೆನ್ಸಿ ಶಿಕ್ಷಣ ಮಹಾವಿದ್ಯಾಲಯದ 2025-26 ನೇ ಸಾಲಿನ ರೋಜರ್ಸ್ ಅಂಡ್ ರೋವರ್ಸ್ ಘಟಕದ ವತಿಯಿಂದ ಮಹಾ ವಿದ್ಯಾಲಯದ ಸಭಾಭವನದಲ್ಲಿ ಕಾರ್ಯಗಾರವನ್ನು ಹಮ್ಮಿಕೊಳ್ಳಲಾಯಿತು.ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಭಾರತ ಸ್ಕೌಟ್ಸ್ ಅಂಡ್ ಗೈಡ್ಸ್ ಕರ್ನಾಟಕ ರಾಜ್ಯ ಸಂಘಟನಾ ಆಯುಕ್ತ ಡಿ. ಬಿ. ಅತ್ತಾರ ಅವರು ಮಾತನಾಡಿ, "ವ್ಯಕ್ತಿ, ಪುಸ್ತಕ ಮತ್ತು ಸ್ಥಳ" ಎಂಬ ಮೂರು ಅಂಶಗಳು ವ್ಯಕ್ತಿತ್ವ ವಿಕಸನದ ಪ್ರಮುಖ ತಳಹದಿಗಳಾಗಿವೆ ಎಂದು ತಿಳಿಸಿದರು.ಅತಿಥಿಗಳಾಗಿ ಆಗಮಿಸಿದ್ದ ಜಿಲ್ಲಾ ತರಬೇತಿ ಆಯುಕ್ತ ಎಸ್. ಎಸ್. ಬೊಮ್ಮನಹಳ್ಳಿ ಅವರು ಮಾತನಾಡಿ, ಬೆಳವಣಿಗೆ ಮತ್ತು ಬದಲಾವಣೆ ಜೀವನದ ಮುಖ್ಯ ಅಂಶಗಳಾಗಿದ್ದು, ಸ್ಕೌಟ್ಸ್ ಮತ್ತು ಗೈಡ್ಸ್ ನ ಒಂಬತ್ತು ನಿಯಮಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಪಾಲಿಸಬೇಕು ಎಂದು ತಿಳಿಸಿದರು.

ಇನ್ನೋರ್ವ ಅತಿಥಿ ಪಿ. ಎಸ್. ಕುಂಬಾರ ಅವರು, ದೇಶದ ಅಭಿವೃದ್ಧಿಯಲ್ಲಿ ಯುವಕರ ಪಾತ್ರ ಅತ್ಯಂತ ಮಹತ್ವದ್ದಾಗಿದೆ ಎಂದು ಅಭಿಪ್ರಾಯಪಟ್ಟರು.ಕಾರ್ಯಕ್ರಮದಲ್ಲಿ ನಿವೃತ್ತ ಶಿಕ್ಷಕ ಹಾಗೂ ಸ್ಕೌಟ್ ಮಾಸ್ಟರ್ ಆಗಿರುವ ಆರ್. ಆರ್. ಎಲ್. ಕುಂಟೆ ಅವರು ಭಾಗವಹಿಸಿ ಕಾರ್ಯಕ್ರಮಕ್ಕೆ ಮೆರುಗು ತಂದರು.ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ದಿ ಪ್ರೆಸಿಡೆನ್ಸಿ ಶಿಕ್ಷಣ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಎಸ್. ಟಿ. ಬೋಳರೆಡ್ಡಿ ಅವರು ಮಾತನಾಡಿ, ಸ್ಕೌಟ್ಸ್ ಮತ್ತು ಗೈಡ್ಸ್ ತರಬೇತಿಯನ್ನು ಪಡೆದುಕೊಳ್ಳುವುದು ಪ್ರತಿಯೊಬ್ಬ ವಿದ್ಯಾರ್ಥಿಯ ಆದ್ಯ ಕರ್ತವ್ಯವಾಗಿದೆ ಎಂದು ತಿಳಿಸಿದರು. ಮಹಾಂತೇಶ ನಾವಿ ನಿರೂಪಿಸಿದರು. ಡಾ. ಶಾರದಾ ವಂದಿಸಿದರು.ಈ ಕಾರ್ಯಗಾರದಲ್ಲಿ ಸುಮಾರು 180 ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಭಾಗವಹಿಸಿದ್ದರು.

# ಅಭಿವೃದ್ಧಿ ಖಾತೆ ಹಗ್ಗಜಗ್ಗಾಟದ ನಡುವೆ ಜಯಂತಿ ಆಚರಣೆಗೆ ಬ್ರೇಕ್



ಬೆಂಗಳೂರು: ಬೆಂಗಳೂರು ಅಭಿವೃದ್ಧಿ ಖಾತೆಯ ಅಧಿಕಾರಗಳ ಕುರಿತು ಸ್ಪಷ್ಟತೆ ಸಿಗುವವರೆಗೆ ಜವಾಬ್ದಾರಿ ಸ್ವೀಕರಿಸುವುದಿಲ್ಲ ಎಂದು ಸಚಿವ ಕೃಷ್ಣ ಬೈರೇಗೌಡ ಹೇಳಿದ್ದಾರೆ. "ನನಗೆ ಯಾವುದೇ ಅಸಮಾಧಾನ ಇಲ್ಲ. ಮುಖ್ಯ ಮಂತ್ರಿ ಹಾಗೂ ಪಕ್ಷವು ಬೆಂಗಳೂರಿನ ಅಭಿವೃದ್ಧಿಯಂತಹ ಮಹತ್ವದ ಜವಾಬ್ದಾರಿಯನ್ನು ನೀಡಿದ್ದಾರೆ. ಇದನ್ನು ಅಧಿಕಾರದ ಸ್ಥಾನವಾಗಿ ಅಲ್ಲ, ದೊಡ್ಡ ಹೊಣೆಗಾರಿಕೆಯಾಗಿ ನೋಡುತ್ತೇನೆ" ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ಇದೀಗ ಸಚಿವರ ಈ ಹೇಳಿಕೆಯ ಬೆನ್ನಲ್ಲೇ, ಗ್ರೇಟರ್ ಬೆಂಗಳೂರು ಪ್ರಾಧಿಕಾರ ವತಿಯಿಂದ ಆಯೋಜನೆಗೊಳ್ಳಬೇಕಿದ್ದ ನಾಡಪ್ರಭು ಕೆಂಪೇಗೌಡ ಜಯಂತಿ ಹಾಗೂ .ಅಂಬೇಡ್ಕರ್ ಜಯಂತಿ ಆಚರಣೆ ಮುಂದೂಡಿಕೆಯಾ ಗುವ ಸಾಧ್ಯತೆ ಇದೆ ಎಂಬ ಮಾಹಿತಿ ಲಭ್ಯವಾಗಿದೆ.

ಮೂಲಗಳ ಪ್ರಕಾರ, ಕಳೆದ ಶುಕ್ರವಾರ ಜಿಬಿಎ ಕೇಂದ್ರ ಕಚೇರಿಯಲ್ಲಿ ನಡೆದ ಸಭೆಯಲ್ಲಿ, ಬೆಂಗಳೂರು ನಗರ ಉಸ್ತುವಾರಿ ಸಚಿವರ ನೇಮಕವಾಗುವವರೆಗೆ ಯಾವುದೇ ಜಯಂತಿ ಕಾರ್ಯಕ್ರಮಗಳನ್ನು ಆಯೋಜಿಸದಿರುವ ಬಗ್ಗೆ ಚರ್ಚೆ ನಡೆದಿದೆ ಎನ್ನಲಾಗಿದೆ. ಉಸ್ತುವಾರಿ ಸಚಿವರ ಅನುಪಸ್ಥಿತಿಯಲ್ಲಿ ಅಧಿಕೃತ ಕಾರ್ಯಕ್ರಮ ನಡೆಸುವುದು ಸೂಕ್ತವಲ್ಲ ಎಂಬ ಅಭಿಪ್ರಾಯ ಅಧಿಕಾರಿಗಳ ವಲಯದಲ್ಲಿ ವ್ಯಕ್ತವಾಗಿದೆ.

ಇದೇ ಹಿನ್ನೆಲೆಯಲ್ಲಿ, ಜೂನ್ 18ರಂದು ನಡೆಯಬೇಕಿದ್ದ ಅಂಬೇಡ್ಕರ್ ಜಯಂತಿ ಹಾಗೂ ಜೂನ್ 27ರಂದು ನಿಗದಿಯಾಗಿದ್ದ ಕೆಂಪೇಗೌಡ ಜಯಂತಿ ಆಚರಣೆ ಮುಂದೂಡಿಕೆಯಾಗುವ ಸಾಧ್ಯತೆ ಇದೆ. ಜೊತೆಗೆ, ಕೆಂಪೇಗೌಡ ಪ್ರಶಸ್ತಿಗೆ ಅರ್ಹರ ಪಟ್ಟಿಯನ್ನು ಸಿದ್ಧಪಡಿಸಲು ಸಮಿತಿ ರಚಿಸುವ ಪ್ರಕ್ರಿಯೆಯನ್ನೂ ತಾತ್ಕಾಲಿಕವಾಗಿ ಸ್ಥಗಿತಗೊಳಿಸುವಂತೆ ಸೂಚನೆ ನೀಡಲಾಗಿದೆ ಎನ್ನಲಾಗಿದೆ.

ಬೆಂಗಳೂರು ನಗರ ಉಸ್ತುವಾರಿ ಸಚಿವರ ನೇಮಕ ಹಾಗೂ ಅಭಿವೃದ್ಧಿ ಖಾತೆಯ ಅಧಿಕಾರಗಳ ಕುರಿತು ಸ್ಪಷ್ಟತೆ ಸಿಗುವವರೆಗೆ ಯಾವುದೇ ಪ್ರಕ್ರಿಯೆ ಮುಂದುವರಿಸದಿರಲು ಸೂಚನೆ ನೀಡಲಾಗಿದೆ ಎಂದು ತಿಳಿದುಬಂದಿದೆ. ಇದರ ಪರಿಣಾಮವಾಗಿ ಈ ಬಾರಿಯ ಜಯಂತಿ ಆಚರಣೆಗಳು ವಿಳಂಬವಾಗುವ ಸಾಧ್ಯತೆ ಹೆಚ್ಚಾಗಿದೆ.

# ರಾಜ್ಯದಲ್ಲಿ ಮುಂಗಾರು ಚುರುಕು: ಬೆಂಗಳೂರು ಸೇರಿ ರಾಜ್ಯದ ಹಲವು ಜಿಲ್ಲೆಗಳಿಗೆ yellow ಅಲರ್ಟ್, ಗುಡುಗು ಸಹಿತ ಭಾರೀ ಮಳೆ ಸಾಧ್ಯತೆ



ಬೆಂಗಳೂರು: ಬೆಂಗಳೂರಿನಲ್ಲಿ ಮುಂದಿನ 3 ದಿನಗಳ ಕಾಲ 'ಯೆಲ್ಲೋ ಅಲರ್ಟ್' ಘೋಷಿಸಲಾಗಿದೆ. ನಗರದಲ್ಲಿ ಹಗುರದಿಂದ ಭಾರೀ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಮೋಡ ಕವಿದ ವಾತಾವರಣ ಮತ್ತು ಮಧ್ಯಂತರ ಮಳೆಯೊಂದಿಗೆ ಗುಡುಗು-ಮಿಂಚು ಸಹಿತ ಮಳೆಯಾಗುವ ಸಾಧ್ಯತೆ ಇದೆ ಎಂದು ಐಎಂಡಿ ತಿಳಿಸಿದೆ.

ರಾಜ್ಯದ ಇತರ ಭಾಗಗಳಲ್ಲಿಯೂ ಮುಂದಿನ ಎರಡು ದಿನಗಳ ಕಾಲ ಯೆಲ್ಲೋ ಅಲರ್ಟ್ ಘೋಷಣೆ ಮಾಡಲಾಗಿದೆ. ಮಾನ್ಸೂನ್ ಚುರುಕಾಗಿರುವುದರಿಂದ ಮಳೆಯ ಪ್ರಮಾಣ ಹೆಚ್ಚಾಗಲಿದೆ ಎಂದು ಭಾರತೀಯ ಹವಾಮಾನ ಇಲಾಖೆ (IMD) ತಿಳಿಸಿದೆ.

ಐಎಂಡಿ ಪ್ರಕಾರ, ಬೆಂಗಳೂರು ನಗರ ಮತ್ತು ಗ್ರಾಮಾಂತರ ಪ್ರದೇಶಗಳಲ್ಲಿ ಬುಧವಾರವರೆಗೆ 30□40 ಕಿಮೀ ವೇಗದ ಗಾಳಿಯೊಂದಿಗೆ ಗುಡುಗು ಸಹಿತ ಹಗುರದಿಂದ ಭಾರೀ ಮಳೆಯಾಗುವ ಸಾಧ್ಯತೆ ಇದೆ. ನಗರದಲ್ಲಿ ಗರಿಷ್ಠ ತಾಪಮಾನ ಸುಮಾರು 29 ಡಿಗ್ರಿ ಸೆಲ್ಸಿಯಸ್ ಹಾಗೂ ಕನಿಷ್ಠ ತಾಪಮಾನ ಸುಮಾರು 21 ಡಿಗ್ರಿ ಸೆಲ್ಸಿಯಸ್ ಆಗಿರಲಿದೆ ಎಂದು ತಿಳಿದುಬಂದಿದೆ.

ಇನ್ನು ಕರಾವಳಿ ಕರ್ನಾಟಕ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ಕೆಲವು ಸ್ಥಳಗಳಲ್ಲಿ ಸೋಮವಾರ, ಬುಧವಾರ ಮತ್ತು ಗುರುವಾರ ಭಾರೀ ಮಳೆಯಾಗುವ ಸಾಧ್ಯತೆ ಇದೆ. ಉತ್ತರ ಕನ್ನಡ ಜಿಲ್ಲೆಯಲ್ಲಿ ಬಹುತೇಕ ಸ್ಥಳಗಳಲ್ಲಿ ಹಗುರದಿಂದ ಮಧ್ಯಮ ಮಳೆಯಾಗುವ ನಿರೀಕ್ಷೆಯಿದೆ.

ದಕ್ಷಿಣ ಒಳನಾಡು ಕರ್ನಾಟಕಕ್ಕೂ ಸೋಮವಾರದಿಂದ ಗುರುವಾರದವರೆಗೆ ಭಾರೀ ಮಳೆಯ ಎಚ್ಚರಿಕೆ ನೀಡಲಾಗಿದೆ. ಕೊಡಗು, ಹಾಸನ ಮತ್ತು ಮೈಸೂರು ಜಿಲ್ಲೆಗಳಲ್ಲಿ ಸೋಮವಾರ ಭಾರೀ ಮಳೆಯ ಸಾಧ್ಯತೆ ಇದೆ. ಚಿಕ್ಕಮಗಳೂರು ಮತ್ತು ಚಿತ್ರದುರ್ಗದಲ್ಲಿಯೂ ಬುಧವಾರವರೆಗೆ ಮಳೆಯಾಗುವ ಸಾಧ್ಯತೆ ಇದೆ ಎಂದು ಇಲಾಖೆ ತಿಳಿಸಿದೆ.

ಮುಂದಿನ 4-5 ದಿನಗಳಲ್ಲಿ ಮುಂಗಾರು ಕರ್ನಾಟಕದ ಉಳಿದ ಭಾಗಗಳಲ್ಲಿಗೂ ವ್ಯಾಪಿಸುವ ಸಾಧ್ಯತೆ ಇರುವುದರಿಂದ ಭಾರೀ ಮಳೆಯಾಗುವ ಸಾಧ್ಯತೆಗಳಿವೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ರಾಜ್ಯಾದ್ಯಂತ ತಾಪಮಾನದಲ್ಲಿ ದೊಡ್ಡ ಬದಲಾವಣೆ ನಿರೀಕ್ಷೆ ಇಲ್ಲದಿದ್ದರೂ, ಮುಂದಿನ ಕೆಲವು ದಿನಗಳಲ್ಲಿ ಗರಿಷ್ಠ ತಾಪಮಾನ ನಿಧಾನವಾಗಿ ಇಳಿಯುವ ಸಾಧ್ಯತೆ ಇದೆ. ತೀವ್ರ ಮಳೆಯ ಸಮಯದಲ್ಲಿ ನೀರು ನಿಲ್ಲುವ ಸಾಧ್ಯತೆ, ಕಡಿಮೆ ಗೋಚರತೆ ಮತ್ತು ಸಂಚಾರ ಅಡಚಣೆಗಳ ಕಾರಣ ಮಳೆ ಪೀಡಿತ ಪ್ರದೇಶಗಳಲ್ಲಿನ ನಿವಾಸಿಗಳು ಜಾಗರೂಕರಾಗಿರಲು ಸೂಚಿಸಲಾಗಿದೆ.

## ಸರ್ಕಾರಿ ಆದರ್ಶ ವಿದ್ಯಾಲಯ: 6ನೇ ತರಗತಿ ಪ್ರವೇಶಕ್ಕೆ 3ನೇ ಸುತ್ತಿನ ಆಯ್ಕೆ ಪಟ್ಟಿ ಪ್ರಕಟ; ಜೂ.17ರೊಳಗೆ ದಾಖಲಾತಿಗೆ ಅವಕಾಶ

ಬಳ್ಳಾರಿ: ನಗರದ ಸರ್ಕಾರಿ ಆದರ್ಶ ವಿದ್ಯಾಲಯದಲ್ಲಿ 2026-27ನೇ ಸಾಲಿನ 6ನೇ ತರಗತಿ ಪ್ರವೇಶಕ್ಕೆ ಸಂಬಂಧಿಸಿದಂತೆ 3ನೇ ಸುತ್ತಿನ ಆಯ್ಕೆ ಪಟ್ಟಿಯನ್ನು ಬಿಡುಗಡೆ ಮಾಡಲಾಗಿದೆ. ಅರ್ಹ ಅಭ್ಯರ್ಥಿಗಳ ಪ್ರವರ್ಗವಾರು ಕಟ್-ಆಫ್ ಅಂಕಗಳ ಪಟ್ಟಿಯನ್ನು ಶಾಲೆಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ ಎಂದು ವಿದ್ಯಾಲಯದ ಮುಖ್ಯ ಶಿಕ್ಷಕರಾದ ಸತ್ಯನಾರಾಯಣ ಎ.ಕೆ. ತಿಳಿಸಿದ್ದಾರೆ.

ಆಯ್ಕೆ ಪಟ್ಟಿಯಲ್ಲಿ ಸ್ಥಾನ ಪಡೆದಿರುವ ಮಕ್ಕಳ ಪೋಷಕರು ಪ್ರವೇಶಾತಿ ಪಡೆಯಲು ಜೂ.15 ರಿಂದ 17 ರವರೆಗೆ ಕೇವಲ 3 ದಿನಗಳ ಕಾಲ ಮಾತ್ರ ಅವಕಾಶ ಕಲ್ಪಿಸಲಾಗಿದೆ.

ಹಾಗಾಗಿ, ಆಯ್ಕೆ ಪಟ್ಟಿಯಲ್ಲಿರುವ ಮಕ್ಕಳ ಪಾಲಕರು ತುರ್ತಾಗಿ ಸರ್ಕಾರಿ ಆದರ್ಶ ವಿದ್ಯಾಲಯಕ್ಕೆ ಭೇಟಿ ನೀಡಿ, ಪ್ರವೇಶಾತಿ ಅರ್ಜಿ ಫಾರಂ ಪಡೆದುಕೊಳ್ಳಬೇಕು. ತದನಂತರ ಮಗು ಪ್ರಸ್ತುತ ಓದುತ್ತಿದ್ದ ಶಾಲೆಯಿಂದ ವರ್ಗಾವಣೆ ಪತ್ರ ಮತ್ತು ಅಂಕಪಟ್ಟಿಯನ್ನು ಪಡೆದು, ಜೂ.17 ರ ಒಳಗಾಗಿ ಪ್ರವೇಶಾತಿಯನ್ನು ಖಚಿತಪಡಿಸಿಕೊಳ್ಳಬೇಕಾಗಿ ಕೋರಲಾಗಿದೆ.

ನಿಗದಿತ ಅವಧಿಯ ನಂತರ ಬರುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಮುಖ್ಯ ಶಿಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಉತ್ತರಪ್ರಭ ಬಳಗದಿಂದ ಸಾಧಕರಿಗೆ ಸನ್ಮಾನ



ಗದಗ : ನಗರದ ಉತ್ತರಪ್ರಭ ಪ್ರಾದೇಶಿಕ ಕನ್ನಡ ದಿನಪತ್ರಿಕೆಯ ಪ್ರಧಾನ ಕಚೇರಿಯಲ್ಲಿ ಗುರುವಾರ ಸಾಧಕರಿಗೆ ಸನ್ಮಾನ ಕಾರ್ಯಕ್ರಮ ಆಯೋಜಿಸಲಾಯಿತು.

ಪತ್ರಿಕಾ ಕ್ಷೇತ್ರದಲ್ಲಿ ಸಲ್ಲಿಸಿದ ಸಾಧನೆಯನ್ನು ಗುರುತಿಸಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘವು 2024ನೇ ಸಾಲಿನ ಪ್ರತಿಷ್ಠಿತ ಟಿ.ಕೆ. ಮಲಗೊಂಡ ತನಿಖಾ ವರದಿ ಪ್ರಶಸ್ತಿಯನ್ನು ವಿಜಯವಾಣಿ ದಿನಪತ್ರಿಕೆಯ ಹಿರಿಯ ವರದಿಗಾರ ಶಿವಾನಂದ ಹಿರೇಮಠ ಅವರಿಗೆ ನೀಡಿ ಗೌರವಿಸಿದೆ. ಇದೇ ವೇಳೆ, ಮೇರಾ ಯುವ ಭಾರತ್ ಜಿಲ್ಲಾ ಯುವ ಅಧಿಕಾರಿ ರಾಕೇಶ್ ರೆಡ್ಡಿ ಅವರು ಆಂಧ್ರಪ್ರದೇಶ ಸಾರ್ವಜನಿಕ ಸೇವಾ ಆಯೋಗ (ಎಪಿಪಿಎಸ್‌ಸಿ) ನಡೆಸಿದ ಪರೀಕ್ಷೆಯಲ್ಲಿ ಉತ್ತೀರ್ಣರಾಗಿ ಡಿಎಸ್‌ಪಿ ಹುದ್ದೆಗೆ ಆಯ್ಕೆಯಾಗಿರುವ ಹಿನ್ನೆಲೆಯಲ್ಲಿ ಇಬ್ಬರು ಸಾಧಕರನ್ನು ಉತ್ತರಪ್ರಭ ಸಂಸ್ಥಾಪಕ ರವಿಕಾಂತ ಅಂಗಡಿ ಸನ್ಮಾನಿಸಿ ಅಭಿನಂದಿಸಿದರು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ರವಿಕಾಂತ ಅಂಗಡಿ ಅವರು, "ರಾಜ್ಯ ಕಾರ್ಯನಿರತ ಪತ್ರಕರ್ತರ ಸಂಘದ ಟಿ.ಕೆ. ಮಲಗೊಂಡ ತನಿಖಾ ವರದಿ ಪ್ರಶಸ್ತಿ ಶಿವಾನಂದ ಹಿರೇಮಠ ಅವರಿಗೆ ಲಭಿಸಿರುವುದು ಜಿಲ್ಲೆಯ ಹೆಮ್ಮೆಯ ವಿಷಯವಾಗಿದೆ. ತನಿಖಾ ಪತ್ರಿಕೋದ್ಯಮದಲ್ಲಿ ಕಾರ್ಯನಿರ್ವಹಿಸಲು ಧೈರ್ಯ, ನಿಷ್ಠೆ ಮತ್ತು ಸಾಮಾಜಿಕ ಬದ್ಧತೆ ಅಗತ್ಯ. ಶಿವಾನಂದ ಹಿರೇಮಠ ಅವರು ಈ ಗುಣಗಳನ್ನು ಮೈಗೂಡಿಸಿಕೊಂಡು ಸಮಾಜಮುಖಿ ವರದಿಗಳ ಮೂಲಕ ಗುರುತಿಸಿಕೊಂಡಿದ್ದಾರೆ. ಇಂತಹ ಪ್ರತಿಭಾವಂತರನ್ನು ಸನ್ಮಾನಿಸುವುದು ಉತ್ತರಪ್ರಭ ಪತ್ರಿಕಾ ಬಳಗಕ್ಕೆ ಹೆಮ್ಮೆಯ ಸಂಗತಿಯಾಗಿದೆ. ಅವರು ಮುಂದೆಯೂ ಹೆಚ್ಚು ತನಿಖಾ ವರದಿಗಳನ್ನು ಪ್ರಕಟಿಸುವ ಮೂಲಕ ಸಮಾಜ ಸುಧಾರಣೆಗೆ ಹಾಗೂ ಜನಪರ ಆಡಳಿತಕ್ಕೆ ತಮ್ಮ ಕೊಡುಗೆ ನೀಡಲಿ" ಎಂದು ಶುಭ ಹಾರೈಸಿದರು.

ಇದೇ ಸಂದರ್ಭದಲ್ಲಿ ಮಾತನಾಡಿದ ಅವರು, "ಮೇರಾ ಯುವ ಭಾರತ್ ಜಿಲ್ಲಾ ಯುವ ಅಧಿಕಾರಿಯಾಗಿ ರಾಕೇಶ್ ರೆಡ್ಡಿ ಅವರು ಅಲ್ಪಾವಧಿಯಲ್ಲೇ ಹಲವು ಉತ್ತಮ ಕಾರ್ಯಕ್ರಮಗಳನ್ನು ರೂಪಿಸಿ ಯುವಜನತೆಗೆ ಪ್ರೇರಣೆಯಾಗಿದ್ದಾರೆ. ಇದೀಗ ಎಪಿಪಿಎಸ್‌ಸಿ ಪರೀಕ್ಷೆಯಲ್ಲಿ ಡಿಎಸ್‌ಪಿಯಾಗಿ ಆಯ್ಕೆಯಾಗಿರುವುದು ಮತ್ತೊಂದು ಮಹತ್ವದ ಸಾಧನೆಯಾಗಿದೆ. ಅವರು ಪೊಲೀಸ್ ಇಲಾಖೆಯಲ್ಲಿಯೂ ಜನಪರ ಹಾಗೂ ಬಡವರ ಪರವಾದ ಸೇವೆ ಸಲ್ಲಿಸುವ ಮೂಲಕ ಯುವಕರಿಗೆ ಮಾದರಿಯಾಗಲಿ" ಎಂದು ಆಶಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ವಸಂತ ಮಡ್ಲೂರ ಹಾಗೂ ರತ್ನಾಕರವಾಣಿ ದಿನಪತ್ರಿಕೆಯ ಸಂಪಾದಕ ಜಗದೀಶ ಪೂಜಾರ ಸಾಧಕರ ಸಾಧನೆ ಕುರಿತು ಮಾತನಾಡಿದರು.

ಈ ಸಂದರ್ಭದಲ್ಲಿ ಪ್ರೊ. ಎನ್.ಟಿ. ಪೂಜಾರ, ಮೇರಾ ಯುವ ಭಾರತ್ ಕಾರ್ಯಕ್ರಮ ಸಂಯೋಜಕ ರವಿ ಹೊಂಬಾಳಿ, ಮಂಜುನಾಥ ಅರೇಪಲ್ಲಿ, ಎಚ್ಚರಸ್ವಾಮಿ ನಾಯಕ್, ಪುರಪ್ಪ ನಾಯಕ, ಮಲ್ಲಿಕಾರ್ಜುನ ಮಾಳಗಿಮನಿ, ತುಕಾರಾಮ ಲಮಾಣಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# 'ಸಂಘಟನೆ' ಹವ್ಯಕರ ಪ್ರಥಮ ಧ್ಯೇಯವಾಗಲಿ: ಡಾ. ಗಿರಿಧರ ಕಜೆ



ಹುಬ್ಬಳ್ಳಿ: ಹವ್ಯಕ ಸಮಾಜದವರು ಎಲ್ಲ ಕ್ಷೇತ್ರಗಳಲ್ಲೂ ಮುನ್ನುಗ್ಗಬೇಕು. ಎಲ್ಲ ವೈಮನಸ್ಸುಗಳನ್ನು ಬದಿಗಿಟ್ಟು ಸಂಘಟನೆಯಾಗಬೇಕು. ನಮ್ಮದು ಆ ಮತ, ಈ ಮತ ಎನ್ನುವುದನ್ನು ಬಿಡಬೇಕು. ಎಲ್ಲರೂ ಸಂಘಟಿತರಾಗುವ ಮೂಲಕ ಸಮಾಜದ ಏಳಿಗೆಗೆ ಕೊಡುಗೆ ನೀಡಬೇಕು ಎಂದು ಶ್ರೀ ಅಖಿಲ ಹವ್ಯಕ ಮಹಾಸಭಾ ಅಧ್ಯಕ್ಷ ಡಾ. ಗಿರಿಧರ್ ಕಜೆ ಹೇಳಿದರು.

ರವಿವಾರ ಶ್ರೀ ಅಖಿಲ ಹವ್ಯಕ ಮಹಾಸಭಾ, ಹವ್ಯಕ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಸಂಸ್ಥೆ ಹುಬ್ಬಳ್ಳಿ-ಧಾರವಾಡ ಸಹಯೋಗದಲ್ಲಿ ಹುಬ್ಬಳ್ಳಿಯ ಹವ್ಯಕ ಭವನದ ಶಂಕರ ಸಭಾಭವನದಲ್ಲಿ ಏರ್ಪಡಿಸಿದ್ದ ಪ್ರತಿಬಿಂಬ ಕಾರ್ಯಕ್ರಮದ ಸಮಾರೋಪದಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸಮಾಜಕ್ಕೆ ಬೇಕಿರುವುದು ಸಂಘಟನೆ. ಸರಕಾರ ಹವ್ಯಕ ಭಾಷೆ ಅಕಾಡೆಮಿ ಆರಂಭಿಸಿದೆ. ಇದರಿಂದ ನಮ್ಮ ಭಾಷೆಯ ವಿಶೇಷತೆ ವಿಸ್ತೃತಗೊಳ್ಳಲಿದೆ. ಹವ್ಯಕ ಸಮಾಜದವರಲ್ಲಿ ಸಂಸ್ಕಾರ, ಸಂಸ್ಕೃತಿ, ನಡೆ-ನುಡಿಯಲ್ಲಿ ವಿಶೇಷತೆ ಇದೆ. ಇದನ್ನು ಮುಂದಿನ ಪೀಳಿಗೆಗೂ ಕೊಂಡೊಯ್ಯಬೇಕಾಗಿದೆ. ಆ ನಿಟ್ಟಿನಲ್ಲಿ ಪ್ರತಿಬಿಂಬ ಕಾರ್ಯಕ್ರಮವನ್ನು ಆಯೋಜಿಸಿಕೊಂಡು ಬರಲಾಗುತ್ತಿದೆ. 13 ಪ್ರಾಂತ್ಯಗಳಲ್ಲಿ ಪ್ರತಿಬಿಂಬ ಕಾರ್ಯಕ್ರಮ ನಡೆಯಲಿದೆ. 50 ತಾಲೂಕುಗಳನ್ನು ಹವ್ಯಕ ಮಹಿಳಾ ವೇದಿಕೆ ರಚನೆಯಾಗಿದೆ. ಮಹಿಳೆಯರು ಸಮಾಜದ ಕೆಲಸ ಮಾಡಲು ಮುಂದೆ ಬರುತ್ತಿರುವುದು ಸಮಾಜದ ಸಂಸ್ಕಾರಕ್ಕೆ ಉದಾಹರಣೆಯಾಗಿದೆ ಎಂದರು.

ಬ್ರಾಹ್ಮಣ ಸಮಾಜದಲ್ಲಿ ಹವ್ಯಕ ಸಮಾಜದವರು ಹೆಚ್ಚಾಗಿದ್ದೇವೆ. ಹೀಗಾಗಿ ಸಮಾಜದ ಮೇಲೆ ಜವಾಬ್ದಾರಿ ಹೆಚ್ಚಿದೆ ಸಂಸ್ಕಾರ, ಪರಂಪರೆ ಉಳಿಸಿ ಬೆಳೆಸಿಕೊಂಡು ಹೋಗಬೇಕು ಎಂದರಲ್ಲದೆ, ಪ್ರತಿ ವರ್ಷ ಗಾಯತ್ರಿ ಮಹೋತ್ಸವ, ಪ್ರತಿಬಿಂಬ, ಸಂಸ್ಕಾರೋತ್ಸವ ಮಾಡಬೇಕಿದೆ ಎಂದರು.

ಸಮಾಜದಲ್ಲಿ ಕಷ್ಟದಲ್ಲಿರುವವರು ಇದ್ದಾರೆ ಅಂತವರನ್ನು ಮೇಲೆತ್ತುವ ಕಾರ್ಯ ಹವ್ಯಕ ಸಮಾಜ ಮಾಡಬೇಕಿದೆ. ವಿದ್ಯಾರ್ಥಿಗಳಿಗೆ ವಸತಿ ನಿಲಯ, ಭವನ ನಿರ್ಮಾಣದಂತಹ ಕಾರ್ಯಗಳಿಗೆ ಮಹಾಸಭಾ ಚಿಂತನೆ ನಡೆಸಿದೆ ಎಂದರು.

ಹವ್ಯಕ ಸಮುದಾಯವೆಂದರೆ ಪ್ರತಿಭೆಗಳ ಮಹಾಸಾಗರ ಹಾಗೂ ಅದ್ಭುತ ಜ್ಞಾನದ ಗಣಿಯಾಗಿದೆ. ಹವ್ಯಕ ಸಮುದಾಯದ ಪ್ರತಿಭೆಗಳನ್ನು ಪ್ರೋತ್ಸಾಹಿಸಿ ಬೆಳಕಿಗೆ ತರುವ ಕಾರ್ಯವನ್ನು ಸಂಸ್ಥೆ ಕಳೆದ 31 ವರ್ಷಗಳಿಂದ ನಡೆಸಿಕೊಂಡು ಬರುತ್ತಿರುವುದು ಹೆಮ್ಮೆಯ ಸಂಗತಿ ಎಂದರು.

ಯಲ್ಲಾಪುರದ ಸಮಾಜ ಸೇವಕ ಪ್ರಮೋದ ಹೆಗಡೆ ಅವರು ಮಾತನಾಡಿ, ಹವ್ಯಕ ಸಮಾಜವು ಸುಸಂಸ್ಕೃತದಿಂದ ಕೂಡಿದೆ. ನಮ್ಮ ಸಮಾಜಕ್ಕೆ ಸಾವಿರಾರು ವರ್ಷದ ಇತಿಹಾಸವಿದ್ದು, ಎಲ್ಲೇ ಹೋದರೂ ನಮ್ಮನ್ನು ಗುರುತಿಸುವ ಹೊಂದಿದ್ದೇವೆ. ಧನಾತ್ಮಕ ಭಾವನೆಗಳನ್ನು ನಾವು ಹೊಂದಿದ್ದೇವೆ. ವಿಶ್ವದಲ್ಲಿಯೇ ನಮ್ಮ ಸಮಾಜವು ಪ್ರತಿಭಾವಂತರಿಂದ ಕೂಡಿದ್ದು, ಮೂರನೇ ಸ್ಥಾನದಲ್ಲಿದ್ದೇವೆ. ಇದಕ್ಕೆ ನಮ್ಮ ಋಷಿ-ಮುನಿಗಳು ಹಾಕಿಕೊಟ್ಟ ಪರಂಪರೆ ಕಾರಣ ಎಂದರು.

ನಮ್ಮ ಸಮಾಜದವರು ಅತ್ಯುತ್ತಮ ಸಾಧನೆ ಮಾಡಿದ್ದು, ಅವರನ್ನು ಗುರುತಿಸಿ ಸನ್ಮಾನಿಸಿದ್ದೇವೆ. ಇವರು ಸಮಾಜದ ಕನ್ನಡಿ. ಇವರ ಸಾಧನೆ ನಮ್ಮ ಸಮಾಜದ ಮೇಲೆ ಪರಿಣಾಮ ಬೀರಬೇಕು. ಈ ಸಂಖ್ಯೆ ಇನ್ನೂ ಹೆಚ್ಚಬೇಕು ಎಂಬ ಸದುದ್ದೇಶ ಹೊಂದಿದ್ದೇವೆ. ಜೊತೆಗೆ ನಾವು ಬೆಳೆದು ಬಂದ ಬೇರು ಮರೆಯಬಾರದು. ನಮ್ಮ ಪೂರ್ವಜರು ಹಾಕಿಕೊಟ್ಟ ಪರಂಪರೆಯನ್ನು ಮುಂದಿನ ಪೀಳಿಗೆಗೆ ತೆಗೆದುಕೊಂಡು ಹೋಗಬೇಕು. ಮಕ್ಕಳನ್ನು ಉದ್ಯಮಿಗಳನ್ನಾಗಿ ಮಾಡಬೇಕು ಎಂದರು.

ಸಾಹಿತಿ ಅರುಣಕುಮಾರ ಹಬ್ಬು, ಪತ್ರಕರ್ತ ಮೋಹನ ಹೆಗಡೆ, ಗೋಸೇವಕ ದತ್ತಾತ್ರೇಯ ಭಟ್ಟ, ಸಮಾಜ ಸೇವಕ ಆರ್.ಕೆ. ಹೆಗಡೆ, ಕಲಾಸೇವಕ ಆರ್.ಜಿ. ಭಟ್ಟ ವರ್ಗಾಸರ, ಶಿಕ್ಷಣ ತಜ್ಞೆ ಮಂಗಳಾ ಭಟ್ಟ ಅವರಿಗೆ ಹವ್ಯಕ ಸಾಧಕ ಪ್ರಶಸ್ತಿ ನೀಡಿ ಸಮಾಜದಿಂದ ಸನ್ಮಾನಿಸಲಾಯಿತು.

ಸನ್ಮಾನಿತರ ಪರವಾಗಿ ಸಂಯುಕ್ತ ಕರ್ನಾಟಕ ಸಿಇಓ ಹಾಗೂ ಕಾರ್ಯನಿರ್ವಾಹಕ ಸಂಪಾದಕ ಮೋಹನ ಹೆಗಡೆ ಅವರು ಮಾತನಾಡಿ, ಹವ್ಯಕ ಸಮಾಜ ಸಮಾಜದ ಪ್ರತಿನಿಧಿಯಾಗಿ ಗುರುತಿಸಿ, ಸಾಧಕನನ್ನಾಗಿ ಸನ್ಮಾನಿಸುತ್ತಿರುವುದು ಸಂತೋಷ ನೀಡಿದೆ. ಸಾವಿರಾರು ಸಮ್ಮೇಳನಗಳನ್ನು ನೋಡಿದ್ದೇನೆ. ಹವ್ಯಕರ ಸಮ್ಮೇಳನ ವಿಶೇಷತೆಯಿಂದ ಕೂಡಿದೆ. ಇಲ್ಲಿ ಹವ್ಯಕರ ಅಸ್ತಿತ್ವ, ಪರಂಪರೆ ಬೆಳೆಸುವುದರ ಬಗ್ಗೆ ಚರ್ಚೆಯಾಗುವುದು ವಿಶೇಷವಾಗಿದೆ. ಹವ್ಯಕರು ಒಂದಾಗಿದ್ದಾರೆ. ಮತ್ತಷ್ಟು ಸಂಘಟನೆ ಬಲಗೊಳ್ಳಬೇಕು ಎಂದರು.

ಹುಬ್ಬಳ್ಳಿ-ಧಾರವಾಡ ಹವ್ಯಕ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಸಂಸ್ಥೆ ಉಪಾಧ್ಯಕ್ಷ ಶ್ರೀಕಾಂತ ಹೆಗಡೆ ಸ್ವಾಗತಿಸಿ, ಹವ್ಯಕ ಸಮಾಜದ ಪ್ರತಿಯೊಬ್ಬರು ಮಹಾಸಭಾದ ಸದಸ್ಯರಾಗುವಂತೆ ಕರೆ ನೀಡಿ, ವಿದ್ಯಾಕಾಶಿಯಲ್ಲಿ ವಿದ್ಯಾರ್ಥಿ ವಸತಿ ನಿಲಯ ನಿರ್ಮಾಣ ಮಾಡುವ ಬಗ್ಗೆ ತಿಳಿಸಿದರು.

ಗೌರವ ಕಾರ್ಯದರ್ಶಿ ಸುದರ್ಶನ ಹೇಮಾದ್ರಿ, ಹುಬ್ಬಳ್ಳಿ- ಧಾರವಾಡ ಹವ್ಯಕ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಸಂಸ್ಥೆಯ ಅಧ್ಯಕ್ಷ ವಿ.ಎಂ.ಭಟ್, ಹವ್ಯಕ ಮಹಿಳಾ ಮಂಡಳ ಅಧ್ಯಕ್ಷೆ ಅನಿತಾ ಭಟ್ಟ, ಮೂರ್ತಿ ಹೆಗಡೆ, ಡಿ. ಶಂಕರ ಭಟ್ಟ ಇತರರಿದ್ದರು. ಪ್ರಶಾಂತಕುಮಾರ ಭಟ್ ಪ್ರಾಸ್ತಾವಿಕವಾಗಿ ಮಾತನಾಡಿದರು.

**'ಪ್ರತಿಬಿಂಬ' ಪ್ರತಿಭಾ ಶೋಧ ಕಾರ್ಯಕ್ರಮ:** ಬೆಳಿಗ್ಗೆ ಹು-ಧಾ ಪ್ರಾಂತ್ಯ ಪ್ರತಿಬಿಂಬ ಪ್ರತಿಭಾ ಶೋಧ ಕಾರ್ಯಕ್ರಮ ಉದ್ಘಾಟಿಸಿದ ಹು-ಧಾ ಹವ್ಯಕ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಸಂಸ್ಥೆಯ ಅಧ್ಯಕ್ಷ ವಿ.ಎಂ.ಭಟ್ಟ ಅವರು, ಪ್ರತಿಬಿಂಬ ಎಂದರೆ ನಮ್ಮಲ್ಲಿ ಅಡಗಿರುವ ಪ್ರತಿಭೆಯನ್ನು ಅನಾವರಣಗೊಳಿಸುವ ಕಾರ್ಯವಾಗಿದೆ. ಹವ್ಯಕ ಸಮಾಜದಲ್ಲಿ ಹಲವಾರು ಮಾದರಿ ಪ್ರತಿಭೆಗಳು ಇದ್ದು, ಅವರಿಗೆ ಸೂಕ್ತ ವೇದಿಕೆ ಕಲ್ಪಿಸುವ ನಿಟ್ಟಿನಲ್ಲಿ ಇಂತಹ ಕಾರ್ಯಕ್ರಮಗಳು ಅತೀ ಅವಶ್ಯವಾಗಿದೆ ಎಂದು ಹೇಳಿದರು.

ಹವ್ಯಕ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಸಂಸ್ಥೆಯ ಸದಸ್ಯ ಶಿವರಾಮ ಹೆಗಡೆ ಮಾತನಾಡಿದರು. ಇದೇ ಸಂದರ್ಭದಲ್ಲಿ ಅಖಿಲ ಹವ್ಯಕ ಮಹಾಸಭಾದ ಮಹಿಳಾ ವೇದಿಕೆಯ ಹುಬ್ಬಳ್ಳಿ-ಧಾರವಾಡ ಶಾಖೆಗಳನ್ನು ಅಧ್ಯಕ್ಷ ಡಾ.ಗಿರಿಧರ ಕಜೆ ಉದ್ಘಾಟಿಸಿದರು. ಕಾರ್ಯಕ್ರಮದಲ್ಲಿ ಸಂಚಾಲಕ ಮೂರ್ತಿ ಹೆಗಡೆ, ವೀಣಾ ಹೆಗಡೆ, ವಸಂತ ಭಟ್, ಶ್ರೀಕಾಂತ ಹೆಗಡೆ ಸೇರಿದಂತೆ ಅನೇಕರಿದ್ದರು.

**'ಪ್ರತಿಬಿಂಬ'ದಲ್ಲಿ ಪ್ರತಿಭೆ ಅನಾವರಣ, ಹಬ್ಬದ ಸಂಭ್ರಮ:** ಗೋಕುಲ ರಸ್ತೆಯ ಹವ್ಯಕ ಭವನದಲ್ಲಿ ಅಕ್ಷರಶಃ ಹವ್ಯಕರ ಹಬ್ಬದಂತೆ ಕಂಡು ಬಂತು ಎಂದರೆ ತಪ್ಪೇನಿಲ್ಲ. ಸ್ಪರ್ಧಾ ಸೌರಭ, ಧಾರ್ಮಿಕ ಕಾರ್ಯಕ್ರಮ, ಸಾಧಕರಿಗೆ ಸನ್ಮಾನ, ಸಾಂಸ್ಕೃತಿಕ ವೈಭವದ ಪ್ರತಿಬಿಂಬ ಕಾರ್ಯಕ್ರಮ ಹಬ್ಬದ ವಾತಾವರಣಕ್ಕೆ ಎಡೆಮಾಡಿಕೊಟ್ಟಿತ್ತು. ಬೆಳಗ್ಗೆ ಹೋಮ-ಹವನ ಕಾರ್ಯ ಕ್ರಮ ನಡೆದು ಧಾರ್ಮಿಕತೆ ಮೂಡಿಸಿದರೆ, ಮಹಿಳೆಯರು ಹವ್ಯಕ ಸಂಪ್ರದಾಯದ ಮದುವೆಯಲ್ಲಿ ಹಾಡುವ ನಾಂದಿ, ಮದುಮಗಳನ್ನು ಮಂಟಪಕ್ಕೆ ಕರೆದು ಕೊಂಡು ಬರುವ ಹಾಡು, ಶೋಭಾನೆ, ತೊಟ್ಟಿಲು ಹಾಡು, ಶ್ಲೋಕ ಪಠಣ, ಛದ್ಮವೇಷ, ಆಶುಭಾಷಣ, ದೇಶಭಕ್ತಿಗೀತೆ, ಭಗವದ್ಗೀತಾ ಕಂಠಪಾಠ, ಚಿತ್ರಕಲೆ, ಏಕಪಾತ್ರಾಭಿನಯ, ಹವ್ಯಕ ಸಂಪ್ರದಾಯ ಗೀತೆ, ರಂಗೋಲಿ, ಹವಿರುಚಿ, ಮಣ್ಣಿ, ಕರಕುಶಲ ವಸ್ತುಪ್ರದರ್ಶನದಲ್ಲಿ ಮಕ್ಕಳಿಂದ ಹಿರಿಯರಾದಿಯಾಗಿ ಸೇರಿ ಸಂಭ್ರಮ ದಿಂದ ಪಾಲ್ಗೊಂಡಿದ್ದು ಪ್ರತಿಬಿಂಬ ಕಾರ್ಯಕ್ರಮದ ಸಡಗರ ಹಿಮ್ಮಡಿಗೊಳಿಸಿತ್ತು. ಸಂಜೆ ಸರಿಗಮಪ ಖ್ಯಾತಿಯ ಕುಮಾರಿ ದಿಯಾ ಹೆಗಡೆ ಅವರ ಗಾಯನ, ಸುಪ್ರಸಿದ್ಧ ಕಲಾವಿದರಿಂದ ಸುಧನ್ವಾರ್ಜುನ ಯಕ್ಷಗಾನ ಅಪಾರ ಮೆಚ್ಚುಗೆಗೆ ಪಾತ್ರವಾಯಿತು.

# ವಿದ್ಯಾರ್ಥಿಗಳ ಉಚಿತ ಬಸ್ ಪಾಸ್ ಯೋಜನೆಗೆ ಭರ್ಜರಿ ಸ್ಪಂದನೆ; 2 ದಿನದಲ್ಲಿ 2,764 ಪಾಸ್ ವಿತರಣೆ



ಬೆಂಗಳೂರು: ರಾಜ್ಯ ಸರ್ಕಾರದ ಉಚಿತ ಬಸ್ ಪಾಸ್ ಯೋಜನೆಗೆ ವಿದ್ಯಾರ್ಥಿಗಳಿಂದ ಉತ್ತಮ ಸ್ಪಂದನೆ ವ್ಯಕ್ತವಾಗಿದ್ದು, ಯೋಜನೆ ಜಾರಿಯಾದ ಮೊದಲ ಎರಡು ದಿನಗಳಲ್ಲಿ ರಾಜ್ಯದ ನಾಲ್ಕು ಸಾರಿಗೆ ನಿಗಮಗಳು ಒಟ್ಟು 2,764 ಉಚಿತ ಬಸ್ ಪಾಸ್‌ಗಳನ್ನು ವಿತರಿಸಿವೆ. ಶುಕ್ರವಾರ 821 ಪಾಸ್‌ಗಳು ಹಾಗೂ ಶನಿವಾರ 1,943 ಪಾಸ್‌ಗಳು ವಿತರಣೆ ಮಾಡಲಾಗಿದೆ ಎಂದು ತಿಳಿದುಬಂದಿದೆ.

ನಾಲ್ಕು ಸಾರಿಗೆ ನಿಗಮಗಳ ಪೈಕಿ ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ನಿಗಮ (ಎನ್‌ಡಬ್ಲ್ಯೂಕೆಆರ್‌ಟಿಸಿ) 995 ಪಾಸ್‌ಗಳನ್ನು, ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ (ಕೆಎಸ್‌ಆರ್‌ಟಿಸಿ) 860 ಪಾಸ್‌ಗಳನ್ನು, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ (ಕೆಕೆಆರ್‌ಟಿಸಿ) 641 ಪಾಸ್‌ಗಳನ್ನು ಹಾಗೂ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ (ಬಿಎಂಟಿಸಿ) 268 ಪಾಸ್‌ಗಳನ್ನು ವಿತರಿಸಿವೆ ಎಂದು ತಿಳಿದುಬಂದಿದೆ.

ರಾಜ್ಯ ಸರ್ಕಾರ ಜೂನ್ 11ರಂದು ಆದೇಶ ಹೊರಡಿಸಿ, ರಾಜ್ಯದ ಎಲ್ಲ ಶಾಲಾ ಹಾಗೂ ಕಾಲೇಜು ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ಸೌಲಭ್ಯವನ್ನು ವಿಸ್ತರಿಸಿತ್ತು.

ಈ ಯೋಜನೆಯಡಿ ಕರ್ನಾಟಕದ ವಿದ್ಯಾರ್ಥಿಗಳು ನೆರೆಯ ರಾಜ್ಯಗಳ ಶಿಕ್ಷಣ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿದ್ದರೂ ಸೌಲಭ್ಯ ಪಡೆಯಬಹುದಾಗಿದೆ. ಹಾಗೆಯೇ ನೆರೆಯ ರಾಜ್ಯಗಳ ಗಡಿ ಭಾಗದ ವಿದ್ಯಾರ್ಥಿಗಳು ಕರ್ನಾಟಕದಲ್ಲಿ ಶಿಕ್ಷಣ ಪಡೆಯುತ್ತಿದ್ದರೂ ಅವರಿಗೆ ಉಚಿತ ಬಸ್ ಪಾಸ್ ದೊರೆಯಲಿದೆ.

ಈ ಯೋಜನೆಗೆ ವಾರ್ಷಿಕವಾಗಿ ಸುಮಾರು ರೂ.286.08 ಕೋಟಿ ವೆಚ್ಚವಾಗಲಿದೆ ಎಂದು ಅಂದಾಜಿಸಲಾಗಿದ್ದು, ಪ್ರಕ್ರಿಯಾ ಶುಲ್ಕ ಮತ್ತು ಅಪಘಾತ ಪರಿಹಾರ ನಿಧಿಗಾಗಿ ಹೆಚ್ಚುವರಿಯಾಗಿ ರೂ.15 ಕೋಟಿ ಮೀಸಲಿಡಲಾಗಿದೆ.

ಈ ಹಿಂದೆ ವಿದ್ಯಾರ್ಥಿ ಬಸ್ ಪಾಸ್ ವೆಚ್ಚವನ್ನು ಸರ್ಕಾರ, ಸಾರಿಗೆ ನಿಗಮಗಳು ಹಾಗೂ ವಿದ್ಯಾರ್ಥಿಗಳು ಹಂಚಿಕೊಂಡು ಭರಿಸುತ್ತಿದ್ದರು. ಇದೀಗ ಸಂಪೂರ್ಣ ಉಚಿತವಾಗಿ ಪಾಸ್‌ಗಳನ್ನು ನೀಡಲಾಗುತ್ತಿದೆ.

ವಿದ್ಯಾರ್ಥಿಗಳು ಸೇವಾ ಸಿಂಧು ಪೋರ್ಟಲ್ ಮೂಲಕ ತಮ್ಮ ಶಾಲೆ, ಕಾಲೇಜು ಅಥವಾ ಯಾವುದೇ ಸ್ಥಳದಿಂದ ಅರ್ಜಿ ಸಲ್ಲಿಸಬಹುದು. ಶಿಕ್ಷಣ ಅರ್ಹತೆ, ಪ್ರಯಾಣದ ದೂರ ಮಿತಿ ಹಾಗೂ ಪಾಸ್‌ನ ಮಾನ್ಯತಾ ಅವಧಿಗೆ ಸಂಬಂಧಿಸಿದ ನಿಯಮಗಳು ಅನ್ವಯವಾಗಲಿವೆ.

ಈ ಯೋಜನೆಯಿಂದ ರಾಜ್ಯದ ಲಕ್ಷಾಂತರ ವಿದ್ಯಾರ್ಥಿಗಳಿಗೆ ಶಿಕ್ಷಣಕ್ಕಾಗಿ ಪ್ರಯಾಣ ವೆಚ್ಚದ ಹೊರೆ ಕಡಿಮೆಯಾಗಲಿದ್ದು, ಶಿಕ್ಷಣಕ್ಕೆ ಹೆಚ್ಚಿನ ಉತ್ತೇಜನ ದೊರೆಯುವ ನಿರೀಕ್ಷೆಯಿದೆ.

# ವಿದ್ಯಾರ್ಥಿಗಳ ಶೈಕ್ಷಣಿಕ ಸಮಸ್ಯೆಗಳ ಪರಿಹಾರಕ್ಕೆ ಬೃಹತ್ ಹೋರಾಟದ ಪೋಸ್ಟರ್ ಬಿಡುಗಡೆ

ವಿಜಯಪುರ: ನಗರದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಇಂದು ದ್ರಾವಿಡ ವಿದ್ಯಾರ್ಥಿ ಪರಿಷತ್ ವತಿಯಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಸಮಸ್ಯೆಗಳ ಪರಿಹಾರಕ್ಕಾಗಿ ಹಮ್ಮಿಕೊಳ್ಳಲಿರುವ ಬೃಹತ್ ಹೋರಾಟದ ಪೋಸ್ಟರ್ ಬಿಡುಗಡೆ ಮಾಡಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿ, ದ್ರಾವಿಡ ವಿದ್ಯಾರ್ಥಿ ಪರಿಷತ್ ಅಧ್ಯಕ್ಷ ಹಾಗೂ ವಿದ್ಯಾರ್ಥಿ ನಾಯಕ ಅಕ್ಷಯ್ ಕುಮಾರ್ ಅಜಮನಿ, ರಾಜ್ಯದಾದ್ಯಂತ ವಿದ್ಯಾರ್ಥಿಗಳು ಎದುರಿಸುತ್ತಿರುವ ವಿವಿಧ ಶೈಕ್ಷಣಿಕ ಸಮಸ್ಯೆಗಳ ಕುರಿತು ಜಾಗೃತಿ ಮೂಡಿಸಲು ಹಾಗೂ ಹೋರಾಟವನ್ನು ಸಂಘಟಿಸಲು ಈ ಅಭಿಯಾನವನ್ನು ಆರಂಭಿಸಲಾಗಿದೆ ಎಂದು ತಿಳಿಸಿದರು.

ಪ್ರಸ್ತುತ ಶೈಕ್ಷಣಿಕ ವ್ಯವಸ್ಥೆಯಲ್ಲಿ ವಿದ್ಯಾರ್ಥಿಗಳಿಗೆ ಅಗತ್ಯವಾದ ಪ್ರಾಯೋಗಿಕ ತರಬೇತಿಗಳು ಸಮರ್ಪಕವಾಗಿ ದೊರೆಯುತ್ತಿಲ್ಲ. ಅಲ್ಲದೆ, ಕೆಲವು ಶೈಕ್ಷಣಿಕ ಸಂಸ್ಥೆಗಳಲ್ಲಿ ನಿಯಮಬಾಹಿರವಾಗಿ ಹೆಚ್ಚಿನ ಶುಲ್ಕ ವಸೂಲಿ ಮಾಡಲಾಗುತ್ತಿದ್ದು, ವಿದ್ಯಾರ್ಥಿಗಳು ಮತ್ತು ಪೋಷಕರು ಆರ್ಥಿಕ ಸಂಕಷ್ಟಕ್ಕೆ ಒಳಗಾಗುತ್ತಿದ್ದಾರೆ ಎಂದು ಅವರು ಆರೋಪಿಸಿದರು.

ಇಂದಿನ ಅಗತ್ಯಗಳಿಗೆ ಅನುಗುಣವಾಗಿ ರಾಷ್ಟ್ರೀಯ ಶಿಕ್ಷಣ ನೀತಿ (NEP)ಯನ್ನು ಸಮರ್ಪಕವಾಗಿ ಜಾರಿಗೊಳಿಸಿಲ್ಲ. ಅನೇಕ ತರಬೇತಿ ಸಂಸ್ಥೆಗಳಲ್ಲಿ ಕಂಪ್ಯೂಟರ್ ಲ್ಯಾಬ್, ಸ್ಮಾರ್ಟ್ ಬೋರ್ಡ್, ಸುಸಜ್ಜಿತ ಗ್ರಂಥಾಲಯ ಸೇರಿದಂತೆ ಮೂಲಭೂತ ಶೈಕ್ಷಣಿಕ ಸೌಲಭ್ಯಗಳ ಕೊರತೆ ಇದ್ದರೂ ಸಂಬಂಧಿಸಿದ ಅಧಿಕಾರಿಗಳು ಸೂಕ್ತ ಗಮನ ಹರಿಸುತ್ತಿಲ್ಲ ಎಂದು ಅವರು ತಿಳಿಸಿದರು.

ಕೆಲವು ಶಿಕ್ಷಣ ಸಂಸ್ಥೆಗಳಲ್ಲಿ ವಿದ್ಯಾರ್ಥಿಗಳೊಂದಿಗೆ, ವಿಶೇಷವಾಗಿ ಮಹಿಳಾ ವಿದ್ಯಾರ್ಥಿನಿಯರೊಂದಿಗೆ ಅವಹೇಳನಕಾರಿ ಹಾಗೂ ಅಸಭ್ಯ ರೀತಿಯಲ್ಲಿ ವರ್ತಿಸಲಾಗುತ್ತಿರುವುದು ಖಂಡನೀಯವಾಗಿದೆ. ಪರೀಕ್ಷೆಗಳು ಸಕಾಲಕ್ಕೆ ನಡೆಯದೇ ವಿದ್ಯಾರ್ಥಿಗಳ ಭವಿಷ್ಯ ಅನಿಶ್ಚಿತತೆಯಲ್ಲಿ ಸಿಲುಕಿದ್ದು, ವ್ಯವಸ್ಥಿತ ಮಾರ್ಗದರ್ಶನದ ಕೊರತೆಯಿಂದ ವಿದ್ಯಾರ್ಥಿಗಳು ಸೂಕ್ತ ಅವಕಾಶಗಳಿಂದ ವಂಚಿತರಾಗುತ್ತಿದ್ದಾರೆ ಎಂದು ಹೇಳಿದರು.



ಇದರ ಜೊತೆಗೆ ಆಂತರಿಕ ಅಂಕಗಳು ಹಾಗೂ ಪ್ರಾಯೋಗಿಕ ಪರೀಕ್ಷೆಗಳ ಮೌಲ್ಯಮಾಪನದಲ್ಲಿ ಪಕ್ಷಪಾತ ನಡೆಯುತ್ತಿದ್ದು, ಅನೇಕ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಅನ್ಯಾಯವಾಗುತ್ತಿದೆ ಎಂದು ಆರೋಪಿಸಿದರು.

ವಿದ್ಯಾರ್ಥಿಗಳ ಈ ಎಲ್ಲಾ ಗಂಭೀರ ಸಮಸ್ಯೆಗಳ ವಿರುದ್ಧ ಹಾಗೂ ಶಾಶ್ವತ ಪರಿಹಾರಕ್ಕಾಗಿ ದ್ರಾವಿಡ ವಿದ್ಯಾರ್ಥಿ ಪರಿಷತ್ ವತಿಯಿಂದ ಮುಂಬರುವ ದಿನಗಳಲ್ಲಿ ವಿಜಯಪುರದಲ್ಲಿ ಬೃಹತ್ ಹೋರಾಟವನ್ನು ಹಮ್ಮಿಕೊಳ್ಳಲಾಗುವುದು. ಇದರ ಅಂಗವಾಗಿ ಹೋರಾಟದ ಪೋಸ್ಟರ್ ಬಿಡುಗಡೆ ಮಾಡಲಾಗಿದೆ ಎಂದು ತಿಳಿಸಿದರು.

ಜಿಲ್ಲೆಯ ಎಲ್ಲಾ ವಿದ್ಯಾರ್ಥಿಗಳು, ವಿವಿಧ ವಿದ್ಯಾರ್ಥಿ ಸಂಘಟನೆಗಳ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಹೋರಾಟದಲ್ಲಿ ಭಾಗವಹಿಸಿ ಯಶಸ್ವಿಗೊಳಿಸಬೇಕೆಂದು ಅವರು ಮನವಿ ಮಾಡಿದರು.

ಈ ಸಂದರ್ಭದಲ್ಲಿ ರಾಹುಲ್ ಕಳಸದ, ಮಂಜುನಾಥ್ ಕವಳಿ, ಆದರ್ಶ್, ಸಂದೇಶ್ ಕುಮಟಗಿ, ಭೀಮು ಛಲವಾದಿ, ಸಿದ್ದು, ಸಂದೀಪ್, ಮಹೇಶ್, ಚಿದಾನಂದ, ಸಚಿನ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಅನುಭವಾಮೃತವು ಗೀತೆಯ ಕೈಗನ್ನಡಿ : ಶಿಲ್ಪಾ ಭಸ್ಮೆ



ವಿಜಯಪುರ: ವೇದೋಪನಿಷತ್ತುಗಳು ಭಾರತೀಯ ಸಂಸ್ಕೃತಿಯ ಮೂಲ ಬೇರು. ಹಾಗೆ ಮಹಾಲಿಂಗರ ಅನುಭವಾಮೃತವು ಭಗವದ್ಗೀತೆಗೆ ಹಿಡಿದ ಕೈಗನ್ನಡಿಯಾಗಿದೆ. ಯೋಗ ಮತ್ತು ಆಧ್ಯಾತ್ಮಿಕತೆಯಲ್ಲಿ ಮನಸ್ಸು, ಬುದ್ಧಿ ಹಾಗೂ ಅಹಂಕಾರಗಳನ್ನು ಸಂಪೂರ್ಣವಾಗಿ ಮೀರಿ, ಆಲೋಚನೆಗಳೇ ಇಲ್ಲದ ದೈವಿಕ ಪ್ರಜ್ಞೆಯ ಪರಮೋಚ್ಚ ಸ್ಥಿತಿಯನ್ನು ತಲುಪುವುದೇ ನಿರ್ವಿಕಲ್ಪ ಸಮಾಧಿಯಾಗಿದೆ. ಇದು ಆತ್ಮವು ಆನಂದದಿಂದ ವಿಹರಿಸುವ ಅವಸ್ಥೆ, ಶಾಂತಿಯ ಸ್ಥಿತಿಯಾಗಿದೆ ಎಂದು

ವಿಜಯಪುರ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಗೌರವ ಕಾರ್ಯದರ್ಶಿ ಶಿಲ್ಪಾ ಭಸ್ಮೆ ಅಭಿಪ್ರಾಯ ವ್ಯಕ್ತಪಡಿಸಿದರು.

ಶನಿವಾರ ನಗರದ ಜ್ಞಾನ ಯೋಗಾಶ್ರಮದಲ್ಲಿ ನಡೆದ ಮಹಾಲಿಂಗರಂಗರ ಅನುಭವಾಮೃತದ ಆರನೇ ಅಧ್ಯಾಯವಾದ ಸಪ್ತ ಭೂಮಿಕಿಗಳ ಅಭ್ಯಾಸದ ನಿರ್ವಿಕಲ್ಪ ಸಮಾಧಿ ಎಂಬ ವಿಷಯದ ಕುರಿತಾಗಿ ಶಿಲ್ಪಾ ಭಸ್ಮೆಯವರು ಉಪನ್ಯಾಸವನ್ನು

ನೀಡಿದರು.

ಒಂದೊಂದು ಘಟನೆಯು ಕೂಡ ಮನುಷ್ಯನನ್ನು ಜ್ಞಾನಿಯಾಗಿಸುತ್ತದೆ ಸತ್ಸಂಗ ಇದ್ದಲ್ಲಿ ಮನಸ್ಸು ಸ್ವಚ್ಛವಾಗುವುದು. ಮನಸ್ಸು ಸ್ವಚ್ಛವಿದ್ದಲ್ಲಿ ದೇವರು ನೆಲೆಸುವನು. ಧೀರನಾದ ಗುರುವಿನ ದರುಶನದಿಂದ, ಪರಿಣಾಮದಿಂದ ವ್ಯಕ್ತಿತ್ವದ

ಮೇಲೆ ಬೆಳಕು ಚೆಲ್ಲಲು ಸಾಧ್ಯ. ನಮ್ಮ ಮನಸ್ಸನ್ನು ಯೋಗಭ್ಯಾಸದಿಂದ ದೂರ ಮಾಡಿ ಚಿನ್ಮಯ ರೂಪನಾದ ಆತ್ಮನಲ್ಲಿ ಮನಸ್ಸನ್ನು ಲೀನಗೊಳಿಸುವುದೇ ನಿರ್ವಿಕಲ್ಪ ಸಮಾಧಿ ಆಗಿದೆ. ಹಾಗೆಯೇ ಧೀರನಾದ ಗುರುವಿನ ದಯೆಯಿಂದ ಸಂಸಾರವೆಂಬ ಸಾಗರವನ್ನು ದಾಟಿ ಸುಖವೇ ಮೂರ್ತಿಗೊಂಡಂತ ಸಹಜ ಅದ್ವೈತದೊಳಗೆ ಲೀನವಾಗಿ

ಆನಂದ ಪಡುವುದು ಈ ಬದುಕಿನ ಅರ್ಥ. ಗುರು ಶಿಷ್ಯರ ಸಂಬಂಧ, ಗುರುಭಕ್ತಿ, ದೈವ ಭಕ್ತಿಗಳ ಐಕ್ಯವನ್ನು ತಿಳಿಯಲು ಅಖಂಡ ವಸ್ತು ಒಂದೇ ಆಗುವುದೇ ಹೊರತು ಭೇದವೇನು ತೋರುವುದಿಲ್ಲ ಎಂದು ಹೇಳಿದರು.

ಕೇನೋಪನಿಷತ್ತಿನ ದೇವತೆಗಳು ಅವತರಿಸಿದ ಕಥೆ, ಬುದ್ಧರ ಕಾರುಣ್ಯ ಪಠಾಚಾರ ಸನ್ಯಾಸಿನಿಥಿಚಿ

ಕಥೆ,ರಾಮಾಯಣ ಪುಣ್ಯಕಾಲದ ಕಥೆಯ ದೃಷ್ಟಾಂತಗಳನ್ನು ನೀಡುವುದರ ಮೂಲಕ ವಿವರಣೆಯನ್ನು ನೀಡಿದರು.

ಅಖಿಲ ಭಾರತ ವೀರಶೈವ ಮಹಾಸಭಾದ ಅಧ್ಯಕ್ಷ ವಿ.ಸಿ ನಾಗಠಾಣ ಸ್ವಾಗತಿಸಿದರು.

ಪೂಜ್ಯರಾದ ಮಾಧವಾನಂದ ಸ್ವಾಮೀಜಿಯವರು ಮುಂತಾದವರು ಉಪಸ್ಥಿತರಿದ್ದರು.

# ಮೋದಿ ನೇತೃತ್ವದ 12 ವರ್ಷಗಳ ಆಡಳಿತ ದೇಶವನ್ನು ಅಭಿವೃದ್ಧಿಯ ಹೊಸ ಹಾದಿಗೆ ಕೊಂಡೊಯ್ದಿದೆ: ಸಿ.ಟಿ. ರವಿ

ಬಳ್ಳಾರಿ: ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರದ 12 ವರ್ಷಗಳ ಆಡಳಿತಾವಧಿಯಲ್ಲಿ ದೇಶವು ಆರ್ಥಿಕತೆ, ಮೂಲಸೌಕರ್ಯ, ರಾಷ್ಟ್ರೀಯ ಭದ್ರತೆ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಗಮನಾರ್ಹ ಸಾಧನೆ ದಾಖಲಿಸಿದ್ದು, ಭಾರತವನ್ನು ಅಭಿವೃದ್ಧಿಯ ಹೊಸ ಹಾದಿಯಲ್ಲಿ ಮುನ್ನಡೆಸಲಾಗಿದೆ ಎಂದು ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸಿ.ಟಿ. ರವಿ ಹೇಳಿದರು.

ನಗರದ ಬಿಜೆಪಿ ಜಿಲ್ಲಾ ಕಚೇರಿಯಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೋದಿ ಸರ್ಕಾರ ಜನರ ವಿಶ್ವಾಸ ಗಳಿಸಿ ಆಡಳಿತ ವ್ಯವಸ್ಥೆಗೆ ಹೊಸ ಚೈತನ್ಯ ತುಂಬಿದೆ ಎಂದು ತಿಳಿಸಿದರು. ಭಯೋತ್ಪಾದನೆ ಮತ್ತು ನಕ್ಸಲಿಸಂ ವಿರುದ್ಧ ಕಠಿಣ ಕ್ರಮಗಳನ್ನು ಕೈಗೊಂಡಿರುವ



ಕೇಂದ್ರ ಸರ್ಕಾರ ರಾಷ್ಟ್ರೀಯ ಭದ್ರತೆಯನ್ನು ಬಲಪಡಿಸಿದೆ ಎಂದರು.

ಜಾಗತಿಕ ಪರಿಸ್ಥಿತಿಗಳ ನಡುವೆಯೂ ದೇಶದಲ್ಲಿ ಬೆಲೆ ಏರಿಕೆಯನ್ನು ನಿಯಂತ್ರಿಸುವಲ್ಲಿ ಸರ್ಕಾರ ಯಶಸ್ವಿಯಾಗಿದೆ. ಇಂಧನ ಸ್ವಾವಲಂಬನೆಗಾಗಿ ಎಥನಾಲ್ ಉತ್ಪಾದನೆ ಹಾಗೂ ಸೌರಶಕ್ತಿ ಯೋಜನೆಗಳಿಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ ಎಂದು ಹೇಳಿದರು.

ಮತದಾರರ ಪಟ್ಟಿಯ ವಿಶೇಷ ಸಾಂದರ್ಭಿಕ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ಅಗತ್ಯವಾಗಿದ್ದು, ಶುದ್ಧ ಮತದಾರರ ಪಟ್ಟಿಯನ್ನು ಉಳಿಸಲು ಇದು ಸಹಕಾರಿಯಾಗಲಿದೆ ಎಂದು ಅಭಿಪ್ರಾಯಪಟ್ಟರು.

ರಾಜ್ಯ ಬಿಜೆಪಿ ಅಧ್ಯಕ್ಷರ ಬದಲಾವಣೆ ಕುರಿತ ಪ್ರಶ್ನೆಗೆ ಉತ್ತರಿಸಿದ ಅವರು, ಪಕ್ಷದ ಸಂಸದೀಯ ಮಂಡಳಿ ಕೈಗೊಳ್ಳುವ ನಿರ್ಧಾರಕ್ಕೆ ಬದ್ಧರಾಗಿದ್ದು, ಯಾರೇ ಅಧ್ಯಕ್ಷರಾದರೂ ಅವರ ನೇತೃತ್ವದಲ್ಲಿ ಕಾರ್ಯನಿರ್ವಹಿಸುವುದಾಗಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಬಿಜೆಪಿ ಜಿಲ್ಲಾ ಅಧ್ಯಕ್ಷ ಅನಿಲ್ ಕುಮಾರ್ ಮೋಕಾ, ವಿಧಾನ ಪರಿಷತ್ ಸದಸ್ಯ ವೈ.ಎಂ. ಸತೀಶ್, ಮಾಜಿ ಸಂಸದ ಸಣ್ಣ ಪಕ್ಕೀರಪ್ಪ, ಮಾಜಿ ಶಾಸಕ ಸೋಮಲಿಂಗಪ್ಪ, ಮಾಜಿ ಶಾಸಕ ಜಿ. ಸೋಮಶೇಖರ ರೆಡ್ಡಿ, ಕೆ.ಎಸ್. ದಿವಾಕರ್, ಹನುಮಂತಪ್ಪ, ಪಾಲಣ್ಣ ಸೇರಿದಂತೆ ಬಿಜೆಪಿ ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ನಾಟಕ ಕಲೆ ಸಾಹಿತ್ಯ, ಸಮಾಜದ ಜೀವನಾಡಿ



ಬಳ್ಳಾರಿ: ನಾಟಕ, ಕಲೆ, ಸಾಹಿತ್ಯ ಚಟುವಟಿಕೆಗಳು ಸಮಾಜದ ಜೀವನಾಡಿಯಾಗಿದ್ದು ಮನುಷ್ಯನ ಭಾವನೆಗಳನ್ನು ಅಭಿವ್ಯಕ್ತಗೊಳಿಸುವ ಸೃಜನಶೀಲ ಮಾಧ್ಯಮವಾಗಿವೆ ಎಂದು ಕರ್ನಾಟಕ ವಿಧಾನಪರಿಷತ್ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್.ರವಿಕುಮಾರ್ ತಿಳಿಸಿದರು. ತಾಲೂಕಿನ ಕಪ್ಪಗಲ್ಲು ಗ್ರಾಮದಲ್ಲಿ ರಂಗತೋರಣ ಸಾಂಸ್ಕೃತಿಕ ಸಂಘಟನೆ ಹಮ್ಮಿಕೊಂಡಿದ್ದ ಕಪ್ಪಗಲ್ಲು ನಾಟಕೋತ್ಸವದ ಎರಡನೇ ದಿನದ ನಾಟಕಕ್ಕೆ ಚಾಲನೆ ಹಾಗೂ ಗ್ರಾಮದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪುರಸ್ಕಾರ ನೀಡಿ ಗೌರವಿಸಿ ಅವರು ಮಾತನಾಡಿದರು.

ಕಲೆ, ಸಾಹಿತ್ಯ, ರಂಗಭೂಮಿ ಚಟುವಟಿಕೆಗಳಿಂದ ಸಾಮಾಜಿಕ ಜಾಗೃತಿ ಮೂಡುತ್ತದೆ. ಸಂಸ್ಕೃತಿ ಮತ್ತು ಪರಂಪರೆಯ ರಕ್ಷಣೆಯ ಜೊತೆಗೆ ನಮ್ಮ ಮೂಲ ಸಂಸ್ಕೃತಿ, ಪರಂಪರೆ, ಸಂಪ್ರದಾಯ ಮುಂದಿನ ಪೀಳಿಗೆಗೆ ತಲುಪಿಸಲು ಸಾಧ್ಯವಾಗುತ್ತದೆ. ನೈತಿಕ ಮೌಲ್ಯಗಳನ್ನು ಬಿತ್ತಲು ರಂಗಭೂಮಿ ಚಟುವಟಿಕೆಗಳು ಹೆಚ್ಚು ಪೂರಕವಾಗಿ ಕಾರ್ಯನಿರ್ವಹಿಸುತ್ತವೆ. ಸೃಜನಶೀಲತೆಯೂ ಹೆಚ್ಚುತ್ತದೆ. ಉತ್ತಮ ನಾಟಕಗಳ ವೀಕ್ಷಣೆಯಿಂದ ಕಲ್ಪನಾಶಕ್ತಿ, ಚಿಂತನಾ ಸಾಮರ್ಥ್ಯ ವೃದ್ಧಿಸುತ್ತದೆ ಹಾಗೂ ಪರಸ್ಪರ ಸಹಬಾಳ್ವೆಯ ಮನೋಭಾವ ಬೆಳೆಯುತ್ತದೆ. ಉತ್ತಮ ವಿಚಾರ ಮತ್ತು ಸಂದೇಶಗಳನ್ನು ಜನರಿಗೆ ತಲುಪಿಸುವ ಮೂಲಕ ಸಮಾಜದಲ್ಲಿ ಸಕಾರಾತ್ಮಕ ಬದಲಾವಣೆ ತರಲು ನೆರವಾಗುತ್ತದೆ. ಕಲೆ, ಸಾಹಿತ್ಯ ಹಾಗೂ ರಂಗಭೂಮಿ ಕೇವಲ ಮನರಂಜನಯ ಸಾಧನಗಳಲ್ಲ. ಅವು ಸಮಾಜದ ಜಾಗೃತಿ, ಸಂಸ್ಕೃತಿ ಸಂರಕ್ಷಣೆ ಮತ್ತು ವ್ಯಕ್ತಿತ್ವ ನಿರ್ಮಾಣಕ್ಕೆ ಮಹತ್ವದ ಕೊಡುಗೆ ನೀಡುತ್ತವೆ ಎಂದು ತಿಳಿಸಿದರು.

ಪರೀಕ್ಷೆಯಲ್ಲಿ ಅತಿ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳು ಭವಿಷ್ಯದಲ್ಲಿ ಉತ್ತಮ ಸಾಧನೆ ಮಾಡಿ ಉನ್ನತ ಪದವಿ ಪಡೆಯುವಂತಾಗಲಿ. ಆದರೆ, ಫೇಲ್ ಆದ ವಿದ್ಯಾರ್ಥಿಗಳು ಕೊರಗುವುದು ಬೇಡ. ಪರೀಕ್ಷೆಯಲ್ಲಿ ಫೇಲಾಗುವುದು ಅಂತಿಮವಲ್ಲ. ಬದುಕಿನಲ್ಲಿ ಪಾಸ್ ಆಗುವುದು ದೊಡ್ಡ ಸಂಗತಿ. ಸೋಲು ಹೊಸದೊಂದು ಕಲಿಯುವ ಅನುಭವ ಎಂದೇ ಭಾವಿಸಬೇಕು. ಅಂಕಗಳು ಮಾತ್ರ ಭವಿಷ್ಯವನ್ನು ನಿರ್ಧರಿಸುವುದಿಲ್ಲ. ಸೋಲುಗಳು ಮತ್ತಷ್ಟೂ ಗಟ್ಟಿಯನ್ನಾಗಿಸುತ್ತವೆ. ಬದುಕಿನಲ್ಲಿ ಸಂಕಷ್ಟಗಳನ್ನು ಎದುರಿಸುವ ಸಾಮರ್ಥ್ಯವನ್ನು ರೂಪಿಸುತ್ತವೆ. ತಪ್ಪುಗಳಿಂದ ಕಲಿತು ಮತ್ತೆ ಪುಟಿದೇಳಬೇಕು ಎಂದು ಸಲಹೆ ನೀಡಿದರು.

ಲೆಕ್ಕ ಪರಿಶೋಧಕರ ಸಂಘದ ಅಧ್ಯಕ್ಷ ಪುರುಷೋತ್ತಮ ರೆಡ್ಡಿ ದಮ್ಮೂರು, ಆಹಾರ ಮತ್ತು ಸರಬರಾಜು ಇಲಾಖೆಯ ಬಿ.ಕಟ್ಟೆಗೌಡ, ನಿವೃತ್ತ ಸಹಾಯಕ ಔಷಧ ನಿಯಂತ್ರಣಾಧಿಕಾರಿ ಕೆ.ಎಸ್.ಮಲ್ಲಿಕಾರ್ಜುನ, ಗ್ರಾಮದ ಮುಖಂಡರಾದ ದೊಡ್ಡ ರಾಮಾಂಜಿನಿ ಅವರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ರಂಗತೋರಣ ಸಂಸ್ಥೆಯ ಕಾರ್ಯದರ್ಶಿ ಪ್ರಭುದೇವ ಕಪ್ಪಗಲ್ಲು ಅವರು ಪ್ರಾಸ್ತಾವಿಕ ಮಾತನಾಡಿದರು. ಚಂದ್ರಶೇಖರ ಆಚಾರ್ ಕಪ್ಪಗಲ್ಲು ಹಾಗೂ ಮೆಹತಾಬ್ ಅವರು ಕಾರ್ಯಕ್ರಮ ನಿರ್ವಹಿಸಿದರು. ಕೊನೆಯಲ್ಲಿ ಜೇವರ್ಗಿ ರಾಜಣ್ಣ ಅವರ ರಚನೆ–ನಿರ್ದೇಶನದ ಕುಂಟಕೋಣ ಮೂಕ ಜಾಣ ನಾಟಕ ಪ್ರದರ್ಶನಗೊಂಡಿತು.

# ರಾಷ್ಟ್ರೀಯ ಶಸ್ತ್ರಚಿಕಿತ್ಸಕರ ದಿನಾಚರಣೆ: ಬಳ್ಳಾರಿಯಲ್ಲಿ ರಕ್ತದಾನ ಶಿಬಿರ ಆಯೋಜನೆ



ಬಳ್ಳಾರಿ: ರಾಷ್ಟ್ರೀಯ ಶಸ್ತ್ರಚಿಕಿತ್ಸಕರ ವಾರಾಚರಣೆಯ ಅಂಗವಾಗಿ, ಕೆಎಸ್‌ಸಿ–ಎಎಸ್‌ಐ ಬಳ್ಳಾರಿ ನಗರ ಶಾಖೆಯು ಬಿಎಂಸಿಆರ್‌ಸಿ ಯ ಅಂತಿಮ ವರ್ಷದ ಎಂ.ಬಿ.ಬಿ.ಎಸ್. ವಿದ್ಯಾರ್ಥಿಗಳಾದ 'ಅದ್ವೈತ ಬ್ಯಾಚ್' ಸಹಯೋಗದೊಂದಿಗೆ ಶನಿವಾರ, ಭಾನುವಾರ ಎರಡು ದಿನಗಳ ಕಾಲ ಹಮ್ಮಿಕೊಂಡಿದ್ದ ರಕ್ತದಾನ ಶಿಬಿರವು ಅತ್ಯಂತ ಯಶಸ್ವಿಯಾಗಿ ಜರುಗಿತು.

ಜೀವ ಉಳಿಸುವ ಹಾಗೂ ಸಮಾಜ ಸೇವೆಯ ಈ ಮಹತ್ವದ ಕಾರ್ಯಕ್ಕೆ ವೈದ್ಯಕೀಯ ವಿದ್ಯಾರ್ಥಿಗಳು, ವೈದ್ಯರು, ಆರೋಗ್ಯ ಸಿಬ್ಬಂದಿ ಹಾಗೂ ಸಾರ್ವಜನಿಕ ರಿಂದ ಅಭೂತಪೂರ್ವ ಸ್ಪಂದನೆ ವ್ಯಕ್ತವಾಯಿತು.

ಮುಖ್ಯ ಅತಿಥಿಯಾಗಿ ಬಿಎಂಸಿಆರ್‌ಸಿ ನಿರ್ದೇಶಕ ಡಾ.ಟಿ.ಗಂಗಾಧರ ಗೌಡ ಅವರು ಭಾಗವಹಿಸಿ ಮಾತನಾಡಿ, ಸಮುದಾಯದ ಆರೋಗ್ಯ ಸೇವೆಗೆ ಸಂಬಂಧಿಸಿದ ಇಂತಹ ಸಾಮಾಜಿಕ ಕಾರ್ಯಗಳ ಅಗತ್ಯತೆ ಆವಶ್ಯಕವಾಗಿವೆ. ಸ್ವಯಂಪ್ರೇರಿತ ರಕ್ತದಾನ ಮತ್ತು ವೈದ್ಯಕೀಯ ವಲಯದಲ್ಲಿ ಸಾಮಾಜಿಕ ಜವಾಬ್ದಾರಿಯ ಮಹತ್ವ ಇನ್ನಷ್ಟು ಅರಿತುಕೊಳ್ಳಬೇಕಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಕೆಎಸ್‌ಸಿ–ಎಎಸ್‌ಐ ಖಜಾಂಚಿ ಡಾ.ಯಾಳಗುರು ಬಸವನಗೌಡ, ಎಎಸ್‌ಐ ಕಾರ್ಯದರ್ಶಿ ಡಾ.ಗಡ್ಡಿ ದಿವಾಕರ್, ಕೆಎಸ್‌ಸಿ–ಎಎಸ್‌ಐ ಬಳ್ಳಾರಿ ನಗರ ಶಾಖೆಯ ಅಧ್ಯಕ್ಷ ಡಾ.ಶೇಕಪ್ಪ ಸಿ.ಮಾಳಗಿಮನಿ, ಕಾರ್ಯದರ್ಶಿ ಡಾ.ಗುಡೇಕೋಟೆ ರವಿಕುಮಾರ, ಜಂಟಿ ಕಾರ್ಯದರ್ಶಿ ಡಾ.ಶೈಖ್ ಫರ್ಹಾನ್ ಎಂ.ಬಿ. ಹಾಗೂ ಖಜಾಂಚಿ ಡಾ.ಅತುಲ್ ಕುಲಕರ್ಣಿ ಅವರು ರಕ್ತದಾನ ಶಿಬಿರವನ್ನು ಯಶಸ್ವಿಯಾಗಿ ಆಯೋಜಿಸಿದ ಬಳ್ಳಾರಿ ನಗರ ಶಾಖೆಯ ಶ್ರಮವನ್ನು ಶ್ಲಾಘಿಸಿದರು.

ಕರುಣೆ, ಸೇವಾ ಮನೋಭಾವ ಹಾಗೂ ಸಮುದಾಯದ ಕಲ್ಯಾಣವನ್ನು ಬಿಂಬಿಸುವ ಈ ರಕ್ತದಾನ ಶಿಬಿರವು ಸಾರ್ವಜನಿಕ ವಲಯದಲ್ಲಿ ವ್ಯಾಪಕ ಪ್ರಶಂಸೆಗೆ ಪಾತ್ರವಾಯಿತು.

ಈ ವೇಳೆ ಅದ್ವೈತ ಬ್ಯಾಚ್ ವಿದ್ಯಾರ್ಥಿಗಳು, ಅಧ್ಯಾಪಕ ವೃಂದ, ಸ್ನಾತಕೋತ್ತರ ಹಾಗೂ ಪದವಿಪೂರ್ವ ವೈದ್ಯಕೀಯ ವಿದ್ಯಾರ್ಥಿಗಳು, ಆರೋಗ್ಯ ಸಿಬ್ಬಂದಿ ಮತ್ತು ಸ್ವಯಂಪ್ರೇರಿತವಾಗಿ ರಕ್ತದಾನ ಮಾಡಿದ ಎಲ್ಲಾ ಮಹಾದಾನಿ ಗಳಿಗೆ ಆಯೋಜಕರು ಹೃತ್ಪೂರ್ವಕ ಕೃತಜ್ಞತೆ ಸಲ್ಲಿಸಿದರು.

# ಮನೋಭಾಯ.ಎಸ್ ಗೆ ಪಿಎಚ್‌ಡಿ ಪದವಿ

ಬಳ್ಳಾರಿ: ನಗರದ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯದ ಸೂಕ್ಷ್ಮಜೀವಶಾಸ್ತ್ರ ಅಧ್ಯಯನ ವಿಭಾಗದ ಸಂಶೋಧನಾರ್ಥಿ ಮನೋಭಾಯ.ಎಸ್ ಅವರಿಗೆ ಪಿಎಚ್‌ಡಿ ಪದವಿ ಲಭಿಸಿದೆ.

ವಿವಿಯ ಸೂಕ್ಷ್ಮಜೀವಶಾಸ್ತ್ರ ಅಧ್ಯಯನ ವಿಭಾಗದ ಸಂಯೋಜಕರು ಹಾಗೂ ಸಹಾಯಕ ಪ್ರಾಧ್ಯಾಪಕರಾದ ಡಾ.ಕೃಷ್ಣವೇಣಿ ಆರ್. ಅವರ ಮಾರ್ಗದರ್ಶನದಲ್ಲಿ "ಸ್ಟಡೀಸ್ ಆನ್ ದ ಇನ್ ವೈವೋ ಮಾಸ್ ಮಲ್ಟಿಪ್ಲಿಕೇಶನ್ ಆಫ್ ಎಂಟಮೋಪ್ಯಾಥೋಜೆನಿಕ್ ನೇಮಟೋಡ್, ಹೆಟಿರರ್‍ಯಾಬ್‌ಡೈಟಿಸ್ ಇಂಡಿಕಾ ಟುವರ್ಡ್ಸ್ ಡೆವೆಲಪ್‌ಮೆಂಟ್ ಆಫ್ ಪೊಟೆಂಟ್ ಬಯೋಕಂಟ್ರೋಲ್ ಏಜೆಂಟ್" ಎಂಬ ವಿಷಯದ ಮೇಲೆ ಮಹಾ ಪ್ರಬಂಧ ಮಂಡಿಸಿದ ಹಿನ್ನಲೆಯಲ್ಲಿ ಪಿಎಚ್‌ಡಿ ನೀಡಲಾಗಿದೆ ಎಂದು ವಿವಿ ಪ್ರಕಟಣೆಯಲ್ಲಿ ತಿಳಿಸಿದೆ.

# ಎಚ್.ಕೆ.ಪಾಟೀಲ ಅವರಿಗೆ ಸಚಿವ ಸ್ಥಾನಮಾನ ನೀಡುವಂತೆ ಆಗ್ರಹಿಸಿ ಅಭಿಮಾನಿ ಬಳಗದ ವತಿಯಿಂದ ಇಂದು ಬೃಹತ್ ಪ್ರತಿಭಟನೆ




ಗದಗ: ದಕ್ಷ, ಪ್ರಾಮಾಣಿಕ, ಕಳಂಕ ರಹಿತ ಹಾಗೂ ನಾಡು ಕಂಡ ಅಪರೂಪದ ರಾಜಕಾರಣಿ ಎಚ್.ಕೆ. ಪಾಟೀಲ ಅವರನ್ನು ಸಿಎಂ ಡಿಕೆ. ಶಿವಕುಮಾರ ನೇತೃತ್ವದ ಸಚಿವ ಸಂಪುಟದಲ್ಲಿ ಸೇರಿಸಿಕೊಳ್ಳದ ಹಿನ್ನೆಲೆಯಲ್ಲಿ ಎಚ್.ಕೆ. ಪಾಟೀಲ ಅವರ ಅಭಿಮಾನಿ ಬಳಗದ ವತಿಯಿಂದ ಜೂ. 16ರಂದು ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಪಂಚ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಹಾಗೂ ಗದಗ-ಬೆಟಗೇರಿ ಶಹರ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಬಿ.ಬಿ. ಅಸೂಟಿ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಭಾನುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜೂ. 16ರಂದು ಬೆಳಿಗ್ಗೆ 11ಕ್ಕೆ ನಗರದ ದಿ. ಕಾಟನ್ ಸೇಲ್ ಸೊಸೈಟಿಯಿಂದ ಪ್ರತಿಭಟನಾ ಮೆರವಣಿಗೆ ಆರಂಭವಾಗಿ ಭೂಮರಡ್ಡಿ ಸರ್ಕಲ್, ಮಹಾತ್ಮ ಗಾಂಧಿ ಸರ್ಕಲ್, ಮಹೇಂದ್ರಕರ್ ಸರ್ಕಲ್, ಟಾಂಗಾ ಕೂಟ, ಬಸವೇಶ್ವರ ಸರ್ಕಲ್, ಪಂಚರ ಹೊಂಡ, ಜೋಡ ಮಾರುತಿ ದೇವಸ್ಥಾನ ಮಾರ್ಗವಾಗಿ ಮುಳಗುಂದ ನಾಕಾ ತಲುಪಿ ಪ್ರತಿಭಟನೆ ನಡೆಸಲಾಗುವುದು ಎಂದು ಹೇಳಿದರು.

ಎಚ್.ಕೆ. ಪಾಟೀಲ ಅವರಿಗೆ ಸಚಿವ ಸ್ಥಾನ ಅವಶ್ಯಕತೆಯಿಲ್ಲ. ಆದರೆ, ಅವರು ಸಚಿವರಾಗುವುದು ರಾಜ್ಯಕ್ಕೆ ಅವಶ್ಯಕತೆಯಿದೆ. ರಾಜ್ಯದ ನೆಲ, ಜಲ, ಭಾಷೆ ಅಭಿವೃದ್ಧಿಗೆ ಅವರು ಸಚಿವರಾಗುವುದು ತುಂಬಾ ಅವಶ್ಯಕತೆಯಿದೆ. ನಮ್ಮ ಜಿಲ್ಲೆಗೆ, ನಮ್ಮ ಗದಗ ಮತಕ್ಷೇತ್ರಕ್ಕೆ ಅವರ ಅವಶ್ಯಕತೆಯಿದೆ ಇರುವುದರಿಂದ ಸಿಎಂ ಡಿ.ಕೆ. ಶಿವಕುಮಾರ, ಡಿಸಿಎಂ ಜಿ. ಪರಮೇಶ್ವರ, ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ, ಮಾಜಿ ಸಿಎಂ ಸಿದ್ದರಾಮಯ್ಯ, ವರಿಷ್ಠರು ಹಾಗೂ ಹೈಕಮಾಂಡ್ ಮುಂಬರುವ ಸಚಿವ ಸಂಪುಟ ವಿಸ್ತರಣೆಯಲ್ಲಿ ಎಚ್.ಕೆ. ಪಾಟೀಲ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಆಗ್ರಹಿಸಿದರು.

ಗದಗ-ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷರಾದ ಗುರಣ್ಣ ಬಳಗಾನೂರ ಮಾತನಾಡಿ, ಮೊದಲ ಸಚಿವ ಸಂಪುಟದಲ್ಲಿ ಎಚ್.ಕೆ. ಪಾಟೀಲ ಅವರ ಹೆಸರಿಲ್ಲದಿರುವುದನ್ನು ನೋಡಿದಾಗ ಆಶ್ಚರ್ಯ ಹಾಗೂ ನೋವುಂಟಾಯಿತು. ಕಳೆದ 1986ರಿಂದ ಪಕ್ಷ ಸಂಘಟನೆಯಲ್ಲಿ ತೊಡಗಿಕೊಂಡು ಕಾಂಗ್ರೆಸ್ ಪಕ್ಷವನ್ನು ಕಳೆದ 40 ವರ್ಷಗಳಿಂದ ಸಕ್ರೀಯವಾಗಿ ಸಂಘಟನೆ ಮಾಡಿ, ಅವಿರತವಾಗಿ ಶ್ರಮಿಸಿ ಅನೇಕ ಹುದ್ದೆಗಳನ್ನು ನಿಭಾಯಿಸಿ ಸೇವಾ ಹಿರಿತನ ಹೊಂದಿರುವ ನಾಯಕರಿಗೆ ಸಚಿವ ಸ್ಥಾನ ನೀಡಬೇಕಿತ್ತು ಎಂದು ಹೇಳಿದರು.

1993ರಿಂದ ಈವರೆಗೆ ಜವಳಿ, ನೀರಾವರಿ, ಕಾನೂನು, ಪ್ರವಾಸೋದ್ಯಮ, ಗ್ರಾಮೀಣಾಭಿವೃದ್ಧಿ ಪಂಚಾಯತ್‌ರಾಜ್ ಸೇರಿ ಹಲವಾರು ಖಾತೆ ನಿರ್ವಹಿಸಿರುವ ಎಚ್.ಕೆ. ಪಾಟೀಲ ಅವರು ರಾಜ್ಯದ ಜನತೆ ನೆನಪಿಡುವ ಕಾರ್ಯಗಳನ್ನು ಮಾಡುತ್ತ ಬಂದಿದ್ದಾರೆ. ಇಂತಹ ಸಮರ್ಥ ನಾಯಕರಿಗೆ ಸಚಿವ ಸ್ಥಾನ ನಿರಾಕರಣೆ ಮಾಡಿರುವುದು ದೊಡ್ಡ ಅನ್ಯಾಯ. ಮುಂಬರುವ ಸಚಿವ ಸಂಪುಟ ವಿಸ್ತರಣೆಯಲ್ಲಾದರೂ ಸಚಿವ ಸ್ಥಾನ ನೀಡಲೇಬೇಕು ಎಂದು ಒತ್ತಾಯಿಸಿದರು.

ತಾಲೂಕು ಪಂಚಾಯತಿ ಮಾಜಿ ಅಧ್ಯಕ್ಷರಾದ ರವಿ ಮೂಲಿಮನಿ ಮಾತನಾಡಿ, ರಾಜ್ಯದ ಬಡಜನತೆಗೆ ಪ್ರಧಾನಮಂತ್ರಿ ಕುಡಿಯುವ ನೀರು ಕುಡಿಯಬೇಕು ಎಂಬ ಮಹದಾಸೆ ಹೊಂದಿ ರಾಜ್ಯದೆಲ್ಲೆಡೆ ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪನೆಯಾಗಲು ಪ್ರೇರಣೆಯಾದ ಎಚ್.ಕೆ. ಪಾಟೀಲ ಅವರು ಮಹಾತ್ಮ ಗಾಂಧೀಜಿ ಅವರು ಕನಸು ಕಂಡ ಗ್ರಾಮಗಳ ಅಭಿವೃದ್ಧಿಗೆ ವೇಗ ನೀಡಿದ್ದಾರೆ. ಇಂತಹ ದಿಟ್ಟ, ಪ್ರಾಮಾಣಿಚ್ನಾಯಕರಾದ ಎಚ್.ಕೆ. ಪಾಟೀಲ ಅವರಿಗೆ ಸಚಿವ ಸ್ಥಾನ ನೀಡಬೇಕು ಎಂದು ಮನವಿ ಮಾಡಿದರು.

ಮುಖಂಡರಾದ ಮುಳಗುಂದ ಬ್ಲಾಕ್ ಕಮಿಟಿ ಅಧ್ಯಕ್ಷ ಬಸವರಾಜ ಸುಂಕಾಪೂರ, ಗದಗ ಜಿಲ್ಲಾ ಮಹಿಳಾ ಕಾಂಗ್ರೆಸ್ ಜಿಲ್ಲಾಧ್ಯಕ್ಷರಾದ ನೀಲಮ್ಮ ಬೋಳನವರ, ಪ್ರಚಾರ ಸಮಿತಿ ಜಿಲ್ಲಾಧ್ಯಕ್ಷ ಅಶೋಕ ಮಂದಾಲಿ, ನಗರಸಭೆ ಸದಸ್ಯ ಬರಕತಅಲಿ ಮುಲ್ಲಾ, ಅನ್ವರ ನದಾಫ್, ಬಸವರಾಜ ಕಡೆಮನಿ, ಶಾಂತಣ್ಣ ಮುಳವಾಡ, ಬಿ.ಆರ್. ದೇವರಡ್ಡಿ, ವಿದ್ಯಾಧರ ದೊಡ್ಡಮನಿ, ಮಹಮ್ಮದ್ ಶಾಲಗಾರ, ಹುಲ್ಲಶ ಭಜಂತ್ರಿ, ಮಾಂತೇಶ ಮಡಿವಾಳರ, ಪರಪ್ಪ ಕಮತರ, ಅನೀಲ ಗರಗ, ಸರಫರಾಜ ಬಬರ್ಚಿ, ಮೋಹನ ದುರಗಣ್ಣವರ, ಜಾಕೀರ ಕುನ್ನಿಬಾವಿ, ಚಂದ್ರಪ್ಪ ಕರಿಕಟ್ಟಿ, ಸಮೀರ ಕೊಟ್ಟೂರ ಸೇರಿ ಹಲವರು ಇದ್ದರು.

# ನೀಟ್ ಪ್ರಶ್ನೆ ಪತ್ರಿಕೆ ಲೀಕ್ ವಿರುದ್ಧ ದೇಶವ್ಯಾಪಿ ಕಾಂಗ್ರೆಸ್ ಪ್ರತಿಭಟನೆ



ಹುಬ್ಬಳ್ಳಿ: ದೇಶದ ಯುವಕರ ಹಿತರಕ್ಷಣೆ ಕಾಯುವಲ್ಲಿ ಕೇಂದ್ರ ಸರ್ಕಾರ ವಿಫಲವಾಗಿದೆ. ದೇಶದಲ್ಲಿ ನಡೆಯುತ್ತಿರುವ ಸರಣಿ ಪರೀಕ್ಷಾ ಅಕ್ರಮಗಳು, ಪ್ರಶ್ನೆ ಪತ್ರಿಕೆ ಸೋರಿಕೆ ಮತ್ತು ನಿರುದ್ಯೋಗ ಸಮಸ್ಯೆಯನ್ನು ವಿರೋಧಿಸಿ ಕಾಂಗ್ರೆಸ್ ಪಕ್ಷವು ದೇಶಾದ್ಯಂತ ಬೃಹತ್ ಹೋರಾಟ ವನ್ನು ನಡೆಸಲಿದೆ ಎಂದು ರಾಜ್ಯ ಸರ್ಕಾರದ ಮುಖ್ಯ ಸಚೇತಕ ಹಾಗೂ ವಿಧಾನ ಪರಿಷತ್ ಸದಸ್ಯ ಸಲೀಂ ಅಹ್ಮದ್ ಹೇಳಿದರು.

ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಅವರ ನೇತೃತ್ವದಲ್ಲಿ ದೇಶದ ಪ್ರಮುಖ ಶೈಕ್ಷಣಿಕ ಕೇಂದ್ರಗಳಲ್ಲಿ ಬೃಹತ್ ವಿದ್ಯಾರ್ಥಿ ಸಮಾವೇಶಗಳನ್ನು ನಡೆಸಲು ನಿರ್ಧರಿಸಲಾಗಿದೆ ಎಂದರು.

ಎಐಸಿಸಿ ಸಂಘಟನಾ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಅವರು ಈ ಅಭಿಯಾನದ ವಿವರಗಳನ್ನು ನೀಡಿದ್ದು, ಪರೀಕ್ಷಾ ಹಗರಣಗಳು ಮತ್ತು ಉದ್ಯೋಗ ನೇಮಕಾತಿ ವಿಳಂಬದಿಂದ ತೊಂದರೆಗೆ ಒಳಗಾಗಿರುವ ವಿದ್ಯಾರ್ಥಿಗಳು, ಉದ್ಯೋಗ ಆಕಾಂಕ್ಷಿಗಳು ಹಾಗೂ ಶಿಕ್ಷಕರನ್ನು ಒಂದೇ ವೇದಿಕೆಯಡಿ ತರುವುದು ಈ ಹೋರಾಟದ ಮುಖ್ಯ ಉದ್ದೇಶ ಎಂದು ಹೇಳಿದರು.

ಕೇಂದ್ರ ಶಿಕ್ಷಣ ಸಚಿವರು ಶಿಕ್ಷಣ ಇಲಾಖೆ ನಡೆಸುವಲ್ಲಿ ವಿಫಲರಾಗಿದ್ದು, ಅವರ ರಾಜೀನಾಮೆಗೆ ಸಹ ಒತ್ತಾಯಿಸಿ ಪ್ರತಿಭಟಿಸಲಾಗುವುದು ಎಂದರು.

# ಪ್ರತಿಭಟನಾ ಮೆರವಣಿಗೆ

ಕುಂದಗೋಳ: ಸಂತೋಷ ಲಾಡ್ ಹಾಗೂ ಸಲಿಂ ಅಹ್ಮದ್ ಅವರಿಗೆ ಸಚಿವ ಸ್ಥಾನ ನೀಡುವಂತೆ ಆಗ್ರಹಿಸಿ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಕುಂದಗೋಳ ಗಾಳಿ ಮರೆಮ್ಮ ದೇಗುಲದಿಂದ ಅಂಬೇಡ್ಕರ್ ವೃತ್ತದ ವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಿದರು.

ಮನವಿ ಸ್ವೀಕರಿಸಿದ ರಾಜ್ಯ ಕೆಪಿಸಿಸಿ ಸದಸ್ಯ ಅರವಿಂದ ಕಟಗಿ ಮಾತನಾಡಿದರು. ಪ್ರತಿಭಟನೆಯಲ್ಲಿ ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ ಅಧ್ಯಕ್ಷ ಚಂದ್ರಶೇಖರ ಜುಟ್ಟಲ, ಪ.ಪಂ. ಮಾಜಿ ಅಧ್ಯಕ್ಷ ಮಲ್ಲಿಕಾರ್ಜುನ ಕಿರೇಸೂರ ಗ್ಯಾರಂಟಿ ಸಮಿತಿ ಅಧ್ಯಕ್ಷ ನೆಹರು ಪಾಟೀಲ, ಮುಖಂಡರಾದ ಶಿವಾನಂದ ಮುತ್ತಣ್ಣವರ, ಸಲೀಂ ಕ್ಯಾಲಕೂಂಡ, ಯಲ್ಲಪ್ಪಗೌಡ ಪಾಟೀಲ, ಸಿದ್ದಲಿಂಗಪ್ಪ ಕರೆಮ್ಮನವರ, ಖಯಿಂ ನಾಲಬಂದ, ರಾಯೇಸಾಬ ಕಳ್ಳಿಮನಿ, ಬಸವರಾಜ ಶಿರಸಂಗಿ, ಬಾಬಾಜಾನ್ ಮಿಶ್ರಿಕೋಟಿ, ಕಾಂತೇಶ ದೊಡ್ಡಮನಿ, ಶಂಭಯ್ಯ ನಿರಲಗಿ, ರಾಜು ದೊಡ್ಡಶಂಕರ, ಅಬ್ದುಲ್ ಖಾದರ ಜಿಲಾನಿ, ಅಡಿವೆಪ್ಪ ಹೆಬಸೂರ, ಕಾಂತು ದೊಡಮನಿ ಹಾಗೂ ಇತರರಿದ್ದರು.



# ಜೂನ್ 21ರಂದು ಬಿ.ಕೆ. ಹರಿಪ್ರಸಾದ್ ಪದಗ್ರಹಣ

ಹುಬ್ಬಳ್ಳಿ: ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ರಾಜ್ಯ ಘಟಕದ ಅಧ್ಯಕ್ಷರಾಗಿ ನೇಮಕಗೊಂಡಿರುವ ಬಿ.ಕೆ. ಹರಿಪ್ರಸಾದ್ ಅವರ ಪದಗ್ರಹಣ ಕಾರ್ಯಕ್ರಮವನ್ನು ಬೆಂಗಳೂರಿನ ಪ್ಯಾಲೇಸ್ ಗ್ರೌಂಡ್‌ನಲ್ಲಿ ಜೂನ್ 21ರಂದು ಹಮ್ಮಿಕೊಳ್ಳಲಾಗಿದೆ ಎಂದು ವಿಧಾನ ಪರಿಷತ್‌ನ ಸರ್ಕಾರದ ಮುಖ್ಯ ಸಚೇತಕ ಸಲೀಂ ಅಹ್ಮದ್ ತಿಳಿಸಿದರು.

ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಹಿರಿಯ ನಾಯಕರಾದ ಕೆ.ಸಿ. ವೇಣುಗೋಪಾಲ, ರಣದೀಪ್‌ಸಿಂಗ್ ಸುರ್ಜೇವಾಲ್, ಕಾಂಗ್ರೆಸ್ ಪಕ್ಷದ ಹಿರಿಯ ನಾಯಕರು ಹಾಗೂ ಶಾಸಕರು, ಸಂಸದರು, ಮಾಜಿ ಸಚಿವರು ಮುಂತಾದವರು ಭಾಗವಹಿಸುವರು ಎಂದರು.

ಈ ಕಾರ್ಯಕ್ರಮದ ಮೂಲಕ ಮುಂಬರುವ ಜಿಲ್ಲಾ, ತಾಲೂಕು ಹಾಗೂ ಗ್ರಾಮ ಪಂಚಾಯತಿ ಚುನಾವಣೆಗೆ ತಯಾರಿಗೆ ಸಹಕಾರಿ ಆಗಲಿದೆ. ಕಳೆದ 6 ವರ್ಷಗಳ ಕಾಲ ಕೆಪಿಸಿಸಿ ಅಧ್ಯಕ್ಷರಾಗಿ ಪಕ್ಷದ ಸಂಘಟನೆಗೆ ಶ್ರಮಿಸಿದ ನೂತನ ಮುಖ್ಯಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರಿಗೆ ಮತ್ತು ಪಕ್ಷದ ಹಿರಿಯ ನಾಯಕ ಮಾಜಿ ಸಿಎಂ ಸಿದ್ದರಾಮಯ್ಯ ಅವರಿಗೆ ಅಭಿನಂದನಾ



ಸಮಾರಂಭ ಸಹ ಏರ್ಪಡಿಸಲಾಗಿದೆ. ಈ ಕಾರ್ಯಕ್ರಮ ಪಕ್ಷದ ಸಂಘಟನೆಗೆ ಹೆಚ್ಚು ಸಹಕಾರಿಯಾಗಲಿದೆ ಎಂದರು.

# ಸಮಾಜದ ಕಟ್ಟಕಡೆಯ ವ್ಯಕ್ತಿಗೂ ನ್ಯಾಯ ದೊರಕಿಸಲು ವಕೀಲರು ಮುಂದಾಗಬೇಕು

ಧಾರವಾಡ: ದೇಶದ ಪ್ರತಿಯೊಬ್ಬ ನಾಗರಿಕನಿಗೂ ಸಾಮಾಜಿಕ ನ್ಯಾಯ ದೊರಕಿಸುವಲ್ಲಿ ಕಾನೂನು ಸೇವೆಯ ಪಾತ್ರ ಮಹತ್ವದ್ದಾಗಿದೆ. ನ್ಯಾಯಾಂಗ ವ್ಯವಸ್ಥೆಯ ಮೇಲಿನ ಜನರ ವಿಶ್ವಾಸವನ್ನು ಉಳಿಸುವ ಜವಾಬ್ದಾರಿ ವಕೀಲರ ಮೇಲಿದೆ. ಕಕ್ಷಿದಾರರು ನ್ಯಾಯದ ಮೇಲೆ ವಿಶ್ವಾಸ ಇಟ್ಟು ನ್ಯಾಯಾಲಯಕ್ಕೆ ಬಂದಾಗ ಅವರಿಗೆ ನ್ಯಾಯ ಒದಗಿಸುವುದು ವಕೀಲರ ಕರ್ತವ್ಯವಾಗಿದೆ ಕರ್ನಾಟಕ ಉಚ್ಚ ನ್ಯಾಯಾಲಯ ಮತ್ತು ಆಡಳಿತ ನ್ಯಾಯಾಧೀಶ ಎಚ್.ಪಿ. ಸಂದೇಶ ಅವರು ಹೇಳಿದರು.




ಅವರು ಕೃಷಿ ನಗರ ಕೃಷಿ ವಿಶ್ವವಿದ್ಯಾಲಯದ ರೈತ ಜ್ಞಾನ ಕೇಂದ್ರ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಕಾನೂನು ಸೇವಾ ಪ್ರಾಧಿಕಾರ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಹುಬ್ಬಳ್ಳಿ ಕಾನೂನು ಕಾಲೇಜು ಧಾರವಾಡ ವಲಯದ ಅಡಿಯಲ್ಲಿ ಕೃಷಿ ವಿಜ್ಞಾನ ವಿಶ್ವವಿದ್ಯಾಲಯದ ಸಹಯೋಗದಲ್ಲಿ ಧಾರವಾಡ ತರಗತಿಯಿಂದ ನ್ಯಾಯಾಲಯದ ಕೋಣೆಗೆ 4 ನೇ ವಲಯ ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿದರು.

ಭವಿಷ್ಯದಲ್ಲಿ ವಕೀಲರಾಗುವ ಕಾನೂನು ವಿದ್ಯಾರ್ಥಿಗಳು ಅನ್ಯಾಯಕ್ಕೆ ಒಳಗಾದವರ ಧ್ವನಿಯಾಗಿ ಕಾರ್ಯ ನಿರ್ವಹಿಸಬೇಕು. ಇಲ್ಲವಾದರೆ ಕಪ್ಪು ಕೋಟ್ ಧರಿಸುವುದಕ್ಕೆ ಅರ್ಥವಿಲ್ಲ.

ಎಲ್‌ಎಲ್‌ಬಿ ವಿದ್ಯಾರ್ಥಿಗಳು ಶಿಸ್ತು, ಶ್ರಮ, ಸಮಯಪ್ರಜ್ಞೆ, ಆತ್ಮವಿಶ್ವಾಸ ಹಾಗೂ ನಿರ್ಭೀತಿಯನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಸಮಾಜದ ಕಟ್ಟಕಡೆಯ ವ್ಯಕ್ತಿಗೂ ನ್ಯಾಯ ದೊರಕಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಬೇಕು. ನೊಂದವರು, ವಿಧವೆಯರು ಹಾಗೂ ಅನ್ಯಾಯಕ್ಕೆ ಒಳಗಾದವರ ಪರವಾಗಿ ನಿಂತು ಅವರ ಹಕ್ಕುಗಳ ರಕ್ಷಣೆಗೆ ಮುಂದಾಗಬೇಕು ಎಂದು ಅವರು ಹೇಳಿದರು.

ದೇಶದ ವಿವಿಧ ಕಾನೂನುಗಳ ಬಗ್ಗೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು ಅತ್ಯಂತ ಅಗತ್ಯವಾಗಿದೆ. ವಿದ್ಯಾರ್ಥಿಗಳು ಕಾನೂನು ಶಿಕ್ಷಣ ಪಡೆಯುವುದರ ಜೊತೆಗೆ ಸಾಮಾಜಿಕ ಜವಾಬ್ದಾರಿಯನ್ನು ಅರಿತುಕೊಂಡು ನೊಂದ ಮತ್ತು ಶೋಷಿತ ಜನರಿಗೆ ನ್ಯಾಯ ದೊರೆಯುವಂತೆ ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಉಪಕುಲಪತಿ ಪ್ರೊ. ಸಿ.ಬಸವರಾಜು ಅವರು ಮಾತನಾಡಿ. ಮುಂದಿನ ದಿನಗಳಲ್ಲಿ ವಕೀಲರು ಹಾಗೂ ಕಾನೂನು ತಜ್ಞರಾಗಿ ಸಮಾಜಕ್ಕೆ ಉತ್ತಮ ಸೇವೆ ಸಲ್ಲಿಸುವ ಗುರಿ ಹೊಂದಬೇಕು. ಸಮಾಜದಲ್ಲಿ ಸಂಸ್ಕಾರ, ಸಂಸ್ಕೃತಿ ಹಾಗೂ ನೀತಿ ಮೌಲ್ಯಗಳನ್ನು ಬೆಳೆಸುವ ಮೂಲಕ ಉತ್ತಮ ಸಮಾಜ ನಿರ್ಮಾಣ ಸಾಧ್ಯ. ಜಾತಿ, ಧರ್ಮ, ಲಿಂಗ ಭೇದವಿಲ್ಲದೆ ಪ್ರತಿಯೊಬ್ಬರಿಗೂ ಸಮಾನ ನ್ಯಾಯ ದೊರೆಯಬೇಕು. ಕಾನೂನು ಎಲ್ಲರಿಗೂ ಒಂದೇ ಎಂಬ ಅರಿವು ಮೂಡಿದಾಗ ಮಾತ್ರ ಸಮಾಜದಲ್ಲಿ ಶಾಂತಿ, ನೆಮ್ಮದಿ ಮತ್ತು ಸಮಾನತೆ ನೆಲೆಸಲು ಸಾಧ್ಯ. ಕಾನೂನು ಜಾಗೃತಿಯ ಮೂಲಕ ಸಮಾಜದಲ್ಲಿ ಸಕಾರಾತ್ಮಕ ಬದಲಾವಣೆ ಹಾಗೂ ಪರಿವರ್ತನೆ ತರಬಹುದು ಎಂದು ಹೇಳಿದರು.

ಕರ್ನಾಟಕ ಉಚ್ಚ ನ್ಯಾಯಾಲಯ ನ್ಯಾಯಾಧೀಶ ಎಸ್. ಸುನಿಲ್ ದತ್ ಯಾದವ್ ಅವರು ಮಾತನಾಡಿ. ಸಾರ್ವಜನಿಕ ಸೇವಕರು ಕಾನೂನಿನ ಅರಿವು ಹೊಂದಿ ಪ್ರಜಾಪ್ರಭುತ್ವದ ಮೌಲ್ಯಗಳನ್ನು ಕಾಪಾಡಬೇಕು. ಭವಿಷ್ಯದ ವಕೀಲರು ಸಮಾಜದ ಸಮಸ್ಯೆಗಳ ಬಗ್ಗೆ ಜಾಗೃತರಾಗಿದ್ದು, ಕಕ್ಷಿದಾರರಿಗೆ ನ್ಯಾಯ ದೊರಕಿಸುವಲ್ಲಿ ಪ್ರಮುಖ ಪಾತ್ರ ವಹಿಸಬೇಕು. ಲಿಂಗ ಸಮಾನತೆ, ಸಾಮಾಜಿಕ ನ್ಯಾಯ ಹಾಗೂ ಸಾರ್ವಜನಿಕ ಸೇವೆಯ ಮನೋಭಾವವನ್ನು ಬೆಳೆಸಿಕೊಳ್ಳುವ ಮೂಲಕ ಸಮಾಜದ ಅಭಿವೃದ್ಧಿಗೆ ತೊಡಗಿಸಿಕೊಳ್ಳಬೇಕು ಎಂದು ಅವರು ಹೇಳಿದರು.

ಕರ್ನಾಟಕ ಹೈಕೋರ್ಟ್ ಮತ್ತು ಕಾರ್ಯನಿರ್ವಾಹಕ ಅಧ್ಯಕ್ಷ, ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ನ್ಯಾಯಾಧೀಶ ಅನು ಶಿವರಾಮನ್ ಅವರು ಮಾತನಾಡಿ. ಬೆಂಗಳೂರು. ಸಾಮಾಜಿಕ ಬದಲಾವಣೆಗೆ ವೇಗವರ್ಧಕವಾಗಿರುವ ಸೇವಾ ಮೌಲ್ಯಮಾಪನ ಕಾನೂನಿನ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಅಗತ್ಯವಿದೆ. ಕಾನೂನಿನ ಮಹತ್ವ, ಅದರ ಅನುಷ್ಠಾನ ಹಾಗೂ ಜನರಿಗೆ ದೊರೆಯುವ ಸೌಲಭ್ಯಗಳ ಕುರಿತು ಅರಿವು ಮೂಡಿಸುವದು. ಸಮಾಜದಲ್ಲಿ ಸಕಾರಾತ್ಮಕ ಬದಲಾವಣೆ ತರಲು ಮತ್ತು ಸಾರ್ವಜನಿಕ ಸೇವೆಗಳ ಪರಿಣಾಮಕಾರಿತ್ವ ಹೆಚ್ಚಿಸಲು ಸೇವಾ ಮೌಲ್ಯಮಾಪನ ಕಾನೂನು ಸಹಕಾರಿಯಾಗಲಿದೆ ಎಂದು ಅವರು ಹೇಳಿದರು.

ಖಗಿನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶೆ,ಪೂರ್ಣಿಮಾ. ಪೈ ಕಾರ್ಯಕ್ರಮ ನಿರೂಪಿಸಿದರು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಮತ್ತು ಅಧ್ಯಕ್ಷ ,ನೇರಳೆ ವೀರಭದ್ರಯ್ಯ ವಿಜಯ್ ಅವರು ಸ್ವಾಗತಿಸಿದರು. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿ ಅಲ್ಲಪ್ಪ. ಎಂ. ಬಡಿಗೇರ ಅವರು ವ ವಂದಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶ ಮತ್ತು ಅಧ್ಯಕ್ಷ ,ನೇರಳೆ ವೀರಭದ್ರಯ್ಯ ವಿಜಯ್, ಕೆಎಸ್ಎಲ್ಎಸ್ಎ.ಸದಸ್ಯ ಕಾರ್ಯದರ್ಶಿ ಹೆಚ್. ಶಶಿಧರ, ಕೃಷಿ ವಿಜ್ಞಾನ ವಿಶ್ವವಿದ್ಯಾಲಯದ ಉಪಕುಲಪತಿ ಡಾ. ಪಿ.ಯು. ಕೃಷ್ಣರಾಜ್, ವಕೀಲರು ವಿದ್ಯಾರ್ಥಿಗಳು ಹಾಗೂ ಇತರರು ಉಪಸ್ಥಿತರಿದ್ದರು.

# ಪ್ರಹ್ಲಾದ ಅಗಸನಕಟ್ಟೆ ವಿದ್ಯಾರ್ಥಿ ಕಥಾ ಪುರಸ್ಕಾರ ಪ್ರದಾನ



ಹುಬ್ಬಳ್ಳಿ: ಆಧುನಿಕತೆಯೆಂಬುದು ಹರಿವ ನೀರಿನಂತೆ, ಅದು ಮನುಷ್ಯ ಬದುಕಿನಲ್ಲಿ ನಾವು ಇಚ್ಛಿಸದೇ ಹೋದರೂ ಎದುರಾಗುತ್ತದೆ, ಮತ್ತೆ ಕೊಚ್ಚಿ ಹೋಗುತ್ತದೆ. ಪುನಃ ಹೊಸದು ಬರುತ್ತದೆ, ಜೀವನದ ಮೌಲ್ಯಗಳು ಅದಕ್ಕೆ ತಕ್ಕಂತೆ ಬದಲಾವಣೆ ಹೊಂದುತ್ತಿರುತ್ತವೆ, ಸಾಹಿತ್ಯ ಕೂಡ ಇದಕ್ಕೆ ಹೊರತಾಗಿಲ್ಲ ಎಂದು ಡಾ. ಡಿ.ಎಸ್. ಚೌಗಲೆ ನುಡಿದರು.

ಅವರು ಅಕ್ಷರ ಸಾಹಿತ್ಯ ವೇದಿಕೆ, ಹುಬ್ಬಳ್ಳಿ ಮತ್ತು ಕಿಮ್ಸ್ ಸಂಸ್ಥೆ ಸಂಯುಕ್ತಾಶ್ರಯದಲ್ಲಿ ಕಿಮ್ಸ್ ನ ಗೋಲ್ಡನ್ ಜುಬಿಲಿ ಸಭಾಭವನದಲ್ಲಿ ನಡೆದ ಡಾ ಪ್ರಹ್ಲಾದ ಅಗಸನಕಟ್ಟೆ ವಿದ್ಯಾರ್ಥಿ ಕಥಾಸ್ಪರ್ಧೆ'ಯ ಬಹುಮಾನ ಪ್ರದಾನ ಮಾಡಿ ಮಾತನಾಡಿದರು.

ಚಿತ್ರಕಲಾವಿದರು ಬರಹಗಾರರಾದರೆ ಅವರ ಬರವಣಿಗೆಯಲ್ಲೂ ಚಿತ್ರಕಲೆಯ ವಿಸ್ತಾರ ಹಣಕಿಹಾಕುತ್ತದೆ, ಎಲ್ಲ ಕಲೆಯ ಮೂಲ ತತ್ವಗಳೂ ಒಂದೇ ಆಗಿರುತ್ತವೆ, ವಿಜೇತ ಕಥೆಗಾರ್ತಿ ನಭಾ ಮತ್ತು ನಾನು ಮೂಲತಃ ಚಿತ್ರಕಲಾವಿದರು ಅಂದರು. ತೀರ್ಪುಗಾರರಾದ ಚನ್ನಪ್ಪ ಅಂಗಡಿ ಮಾತನಾಡಿ ವಿಜೇತ ಕಥೆಯು ಸಮಕಾಲೀನ ನಾಗರಿಕ ಬದುಕಿನ ಸಾಂಸ್ಕೃತಿಕ ಪಲ್ಲಟಗಳ ಹಿನ್ನೆಲೆಯಲ್ಲಿ ಗಂಡು ಹೆಣ್ಣಿನ ಸಂಬಂಧವನ್ನು ಮರುವ್ಯಾಖ್ಯಾನಕ್ಕೆ ಒಳಪಡಿಸುತ್ತದೆ ಎಂದರು.

ಈ ಬಾರಿಯ ಡಾ.ಪ್ರಹ್ಲಾದ ಅಗಸನಕಟ್ಟೆ ಕಥಾ ಬಹುಮಾನವನ್ನು ಪಡೆದ, ಬೆಂಗಳೂರಿನ ಚಿತ್ರಕಲಾ ಪರಿಷತ್ ನಲ್ಲಿ ಸ್ನಾತಕೋತ್ತರ ಅಧ್ಯಯನ ಮಾಡುತ್ತಿರುವ ನಭಾ, ಬಹುಮಾನ ಸ್ವೀಕರಿಸಿ ಈ ಬಹುಮಾನ ನನಗೆ ಕಥಾ ಬರವಣಿಗೆಯ ಮೇಲಿನ ಆತ್ಮ ವಿಶ್ವಾಸವನ್ನು ಹೆಚ್ಚಿಸಿದೆ ಎಂದರು.

ಅತಿಥಿಗಳಾಗಿ ಆಗಮಿಸಿದ ಕಿಮ್ಸ್ ನಿರ್ದೇಶಕರಾದ ಡಾ. ಕೆ ಎಫ್ ಕಮ್ಮಾರ್ ಆಗಮಿಸಿದ್ದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಮಹಾಂತಪ್ಪ ನಂದೂರ ಕನ್ನಡದ ಕಥೆಗಾರ್ತಿಯರ ಹೊಸ ತಲೆಮಾರು ವಿಭಾನಂಥವರಿಂದ ಮುಂದುವರೆಯುತ್ತಿದೆ ಎಂದರು.

ಹರ್ಷವರ್ಧನ ಅಗಸನಕಟ್ಟೆ ಅಭಿಪ್ರಾಯ ಹಂಚಿಕೊಂಡರು. ಶ್ರೀಮತಿ ವಿಜಯಾ ಅಗಸನಕಟ್ಟೆ ಉಪಸ್ಥಿತರಿದ್ದರು. ಸಿ.ಎಂ ಚೆನ್ನಬಸಪ್ಪ ಮತ್ತು ಡಾ.ಸಿದ್ದೇಶ್ವರ ಕಟಕೋಳ ಅತಿಥಿಗಳನ್ನು ಪರಿಚಯಿಸಿದರು. ಸುನಂದಾ ಕಡಮೆ ಪ್ರಾಸ್ತಾವಿಕ ಮಾತನಾಡಿದರು. ನಿರ್ಮಲಾ ಶೆಟ್ಟರ ಸ್ವಾಗತಿಸಿದರು. ವಿರುಪಾಕ್ಷ ಕಟ್ಟಿಮನಿ ನಿರೂಪಿಸಿದರು.

ಸಿ.ಎಂ ಮುನಿಸ್ವಾಮಿ, ಡಾ ಭಾರತಿ ಹಿರೇಮಠ, ಗಾಯತ್ರಿ ರವಿ, ಪ್ರಕಾಶ ಕಡಮೆ, ಡಾ. ಎಂ.ಡಿ ಒಕ್ಕುಂದ ಡಾ.ವಿನಯಾ, ಲಿಂಗರಾಜ ಅಂಗಡಿ, ಬಿ.ಎಸ್ ಸೊಪ್ಪಿನ, ವೀರಣ್ಣ ಬಡಿಗೇರ, ಪ್ರೊ.ಕೌಜಲಗಿ, ಗೋವಿಂದ ಹೆಗಡೆ, ಪ್ರದೀಪ ಭಟ್ ಮುಂತಾದವರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307 . Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI , KARNATAKA - 590001